ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 287 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 06–06–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 287 | Title- Code: KARKAN 28269 | Chitradurga | Date: 06-06-2024 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಶಿಕ್ಷಣವೇ ಶಕ್ತಿ ಎಂಬ ನಾಣ್ನುಡಿಗೆ ಶಕ್ತಿ ತುಂಬಿದವರು ನಾಲ್ವಡಿ ಕೃಷ್ಣರಾಜ ಒಡೆಯರು 2
ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ, ಪುನರ್ವಸತಿಗೆ ಕ್ರಮ ವಹಿಸಲು ಸೂಚನೆ 3
ಉತ್ತಮ ಪರಿಸರದಿಂದ ಮಾತ್ರ ನಾವು ಬದುಕಲು ಸಾಧ್ಯ 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ವಿಶ್ವ ಪರಿಸರ ದಿನಾಚರಣೆ; ಪ್ರತಿ ತಾಲ್ಲೂಕಿನಲ್ಲಿ 10 ಸಾವಿರ ಗಿಡ ನೆಡಲು ಯೋಜನೆ: ನ್ಯಾ. ಎಂ.ವಿಜಯ್

» ಚಿತ್ರದುರ್ಗ

ಅರಣ್ಯನಾಶದಿಂದ ಪರಿಸರದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುತ್ತಿದೆ. ಇದನ್ನು ತಡೆಗಟ್ಟಲು ಕಾನೂನು ಸೇವಾ ಪ್ರಾಧಿಕಾರವು ಅರಣ್ಯ ಇಲಾಖೆ ಸಹಯೋಗದಲ್ಲಿ, ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ 10 ಸಾವಿರ ಗಿಡ ನಡೆಲು ಯೋಜನೆ ರೂಪಿಸಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್ ಹೇಳಿದರು.

ನಗರದ ಓನಕೆ ಓಬವ್ವ ವೃತ್ತದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ನಗರಸಭೆ ಸಹಯೋಗದಲ್ಲಿ ಆಯೋಜಿಸಲಾದ ಪರಿಸರ ಜಾಥಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚೆಗೆ ದೆಹಲಿಯಲ್ಲಿ 52 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.





ಇದಕ್ಕೆ ಕಾರಣ ಪರಿಸರ ನಾಶ, ರೆಫ್ರಿಜೆರೇಟರ್ ಬಳಕೆಯಿಂದ ಹಾನಿಕಾರ ಸಿಎಫ್‌ಸಿ ಅನಿಲ ವಾತಾವರಣ ಸೇರುತ್ತಿದೆ. ಇದರಿಂದ ಮುಂದಿನ ಪೀಳಿಗೆಯ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತದೆ. ಪ್ರತಿ ಒಬ್ಬರಿಗೂ ಒಂದು ಗಿಡ ಎಂಬ ಘೋಷ ವಾಕ್ಯದೊಂದಿಗೆ ಜಿಲ್ಲೆಯ ಎಲ್ಲಾ ಸಾರ್ವಜನಿಕರು ಗಿಡ ನೆಟ್ಟು ಬೆಳಸಬೇಕು. ಮುಂದಿನ ವರ್ಷ ಚಿತ್ರದುರ್ಗ ಜಿಲ್ಲೆಯಲ್ಲೂ ಉಷ್ಣಾಂಶ 42 ಡಿಗ್ರಿ ಸೆಲ್ಸಿಯಸ್‌ನಿಂದ 35ಕ್ಕೆ ಇಳಿಯಲಿ. ಜಿಲ್ಲೆಯಾದ್ಯಂತ ಮುಂದಿನ ಎರೆಡು ತಿಂಗಳು ಕಾಲ ಗಿಡ ನೆಡುವ ಕಾರ್ಯಕ್ರಮ ನಡೆಯಲಿದೆ. ಮಾಧ್ಯಮಗಳು ಕೂಡ ಸಾರ್ವಜನಿಕರಲ್ಲಿ ಪರಿಸರ ಹಾನಿಯ ಕುರಿತು ಜಾಗೃತಿ ಮೂಡಿಸುವುದರೊಂದಿಗೆ ಪರಿಸರ ರಕ್ಷಣೆ ಕಾರ್ಯಕ್ಕೆ ಕೈ ಜೋಡಿಸಬೇಕು ಎಂದು ನ್ಯಾಯಾಧೀಶ ಎಂ.ವಿಜಯ್ ಕೋರಿದರು.ಪರಿಸರ ಅಧಿಕಾರಿ ಈ. ಪ್ರಕಾಶ್ ಮಾತನಾಡಿ, 'ಭೂ ಮರುಸ್ಥಾಪನೆ, ಮರುಭೂಮಿಕರಣ ಹಾಗೂ ಬರ ತಡೆಯುವಿಕೆ' ಘೋಷವಾಕ್ಯದೊಂದಿಗೆ ಈ ಬಾರಿ ಪರಿಸರ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಅಪರಜಿಲ್ಲಾಧಿಕಾರಿಬಿ.ಟಿ.ಕುಮಾರಸ್ವಾಮಿ ಹಾಗೂ ನಗರಸಭೆ ಆಯುಕ್ತೆ ಎಂ.ರೇಣುಕಾ ಜಾಥ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರುವುದರೊಂದಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಹಿರಿಯ ಪರಿಸರ ಅಧಿಕಾರಿ ರಮೇಶ್ ಡಿ ನಾಯಕ್, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ನಾಶಿರುದ್ದೀನ್, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ನಾಗರಾಜ್ ಸೇರಿದಂತೆ ಕಾಲೇಜು ವಿದ್ಯಾರ್ಥಿನಿಯುರು ಜಾಥದಲ್ಲಿ ಪಾಲ್ಗೊಂಡಿದ್ದರು. ವಿದ್ಯಾರ್ಥಿನಿಯರು ಪರಿಸರ ರಕ್ಷಣೆಯ ಘೋಷಣೆಗಳನ್ನು ಕೂಗುವುದರೊಂದಿಗೆ ನಗರ ಪ್ರಮುಖ ಬೀದಿಗಳಲ್ಲಿ ಸಂಚರಿಸಿದರು.

## ಮುಂದಿನ ಪೀಳಿಗೆಗೆ ಪರಿಸರ ಉಳಿಸಿ: ನ್ಯಾ.ವಾಸುದೇವ್

» ಚಿತ್ರದುರ್ಗ

ಮಕ್ಕಳಿಗಾಗಿ ಆಸ್ತಿ ಮಾಡಿ ಉಳಿಸಿ ಹೋಗುತ್ತವೆ. ಆದರೆ ಪರಿಸರದ ಬಗ್ಗೆ ಕಾಳಜಿ ವಹಿಸುವುದಿಲ್ಲ. ಪರಿಸರ ನಾಶದಿಂದ ಮುಂದಿನ ಪೀಳಿಗೆ ಸಂಕಷ್ಟಕ್ಕೆ ಸಿಲುಕುತ್ತಿದೆ. ಮುಂದಿನ ಪೀಳಿಗೆ ಹಿತ ದೃಷ್ಟಿಯಿಂದ ಪರಿಸರವನ್ನು ಉಳಿಸುವುದು ಅತಿ ಮುಖ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರೋಣ್ ವಾಸುದೇವ್ ಹೇಳಿದರು.

ನಗರದ ಸರ್ಕಾರಿ ಕಲಾ ಕಾಲೇಜಿನಲ್ಲಿ, ಬುಧವಾರ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಅರಣ್ಯ ಇಲಾಖೆ ಹಾಗೂ ಸರ್ಕಾರಿ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾದ ಸಸಿ ನೆಡುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಾತಾವರಣದಲ್ಲಿ ತಾಪಮಾನ ಹೆಚ್ಚಾದ ಹಿನ್ನಲೆಯಲ್ಲಿ ಜನರು ಫ್ಯಾನ್ ಹಾಗೂ ಎಸಿ ಬಳಕೆಗೆ ಮೊರೆ ಹೋಗುತ್ತಿದ್ದಾರೆ. ಎಸಿನ ಬಳಸುವುದರಿಂದ ಕ್ಲೋರೋಫ್ಲೋರೊ ಕಾರ್ಬನ್ ಅನಿಲ ಹೊರಸೂಸುತ್ತದೆ. ಈ ಅನಿಲದಿಂದ



ಓಝೋನ್ ಪದರವು ಹಾನಿಗೊಳಗಾಗಿ ಕ್ಷೀಣಿಸುತ್ತಿದೆ. ಓಝೋನ್ ಪದರವು ಹಾಳಾಗಿ ಸೂರ್ಯನ ಕಿರಣಗಳು ಭೂಮಿಗೆ ನೇರವಾಗಿ ಸ್ಪರ್ಶಿಸುವುದರಿಂದ ತಾಪಮಾನ ಹೆಚ್ಚಾಗುತ್ತದೆ. ತಾಪಮಾನ ಹೆಚ್ಚಾಗಿದೆ ಎಂದು ಮತ್ತದೇ ರೀತಿ ಫ್ಯಾನ್ ಹಾಗೂ ಎಸಿ ಗಳನ್ನು ಬಳಸುವುದರಿಂದ ಓಝೋನ್ ಪದರವು ಇನ್ನೂ ಹೆಚ್ಚು ಹಾನಿಗೊಳಗಾಗುತ್ತದೆ. ಇದರ ಪರಿಣಾಮ ಇನ್ನಷ್ಟು ತಾಪಮಾನ ಹೆಚ್ಚಾಗುತ್ತದೆ.

ಪುಟ ↘ 2

## ಚಿತ್ರದುರ್ಗ ಜ್ಞಾನಗಂಗೋತ್ರಿ: ವಿಶ್ವ ಪರಿಸರ ದಿನಾಚರಣೆ



» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಜಿ.ಆರ್.ಹಳ್ಳಿಯ ದಾವಣಗೆರೆ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ ಜ್ಞಾನ ಗಂಗೋತ್ರಿಯಲ್ಲಿನ ಎನ್‌ಎಸ್‌ಎಸ್ ಘಟಕ 1 ಮತ್ತು 2 ಹಾಗೂ ಸಾಮಾಜಿಕ ಅರಣ್ಯ ವಲಯ, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಸಹಯೋಗದೊಂದಿಗೆ ವಿಶ್ವ ಪರಿಸರ ದಿನಾಚರಣೆ ಮತ್ತು ತಂಬಾಕು ಮುಕ್ತ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಡಾ.ಎಂ.ಯು.ಲೋಕೇಶ್ ಹಾಗೂ ಸಾಮಾಜಿಕ ಅರಣ್ಯ ವಲಯ ಉಪ ಅರಣ್ಯಾಧಿಕಾರಿ ಕೆ. ಹರೀಶ್ ಕೆ, ಅಕ್ಷತಾ ಐ ಬಿ, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಶಿವರಶ್ಮಿ, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳಾದ ಡಾ.ಎಂ. ಸುಂದರಂ ಹಾಗೂ ಬಿ.ಟಿ.ನಿವೇದಿತ ಹಾಗೂ ವಿದ್ಯಾರ್ಥಿಗಳು ಅಧ್ಯಾಪಕ, ಅಧ್ಯಾಪಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

### ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶಿ

# ಸ್ವಚ್ಛತೆ ಮೂಲಕ ಆರೋಗ್ಯಕರ ಪರಿಸರ ನಿರ್ಮಿಸೋಣ

» ಚಿತ್ರದುರ್ಗ

ಸ್ವಚ್ಛತೆ ಕಾಪಾಡುವ ಮೂಲಕ ಆರೋಗ್ಯಕರ ಸುಸ್ಥಿರ ಪರಿಸರ ನಿರ್ಮಿಸೋಣ ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶಿ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಮುದ್ದಾಪುರ ಪ್ರಾಥಮಿಕಆರೋಗ್ಯಕೇಂದ್ರದಲ್ಲಿಬುಧವಾರ ವಿಶ್ವ ಪರಿಸರ ದಿನ ಮತ್ತು ಮಲೇರಿಯಾ ವಿರೋಧಿ ಮಾಸಾರಣೆ ಪ್ರಯುಕ್ತ ಜಾಗೃತಿ ಜಾಥಾ ಸಸಿ ನೆಡುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶುದ್ಧ ನೀರು, ಗಾಳಿ, ಬೆಳಕು ಎಷ್ಟೋ ಸಾಂಕ್ರಾಮಿಕ ರೋಗಗಳನ್ನು ನಿಯಂತ್ರಿಸುತ್ತದೆ. ಕೀಟಜನ್ಯ ರೋಗಗಳಾದ ಡೆಂಗ್ಯೂ, ಚಿಕನ್‌ಗುನ್ಯಾ, ಮಲೇರಿಯಾ ಆನೆಕಾಲುರೋಗಗಳು ಕೀಟಗಳಿಂದ ಹರಡುತ್ತವೆ. ಪರಿಸರ ಮಾಲಿನ್ಯ ಸ್ವಚ್ಛತೆ ಇಲ್ಲದಿದ್ದರೆ ಕೀಟಗಳು ಉತ್ಪತ್ತಿಯಾಗಿ ಮನುಷ್ಯನ ಆರೋಗ್ಯದಲ್ಲಿ ಪರಿಣಾಮ ಬೀರುತ್ತದೆ. ಶುದ್ಧ ನೀರು ಸೇವಿಸದಿದ್ದಾಗ ವಾಂತಿಬೇದಿ ಕಾಲರ ರೋಗಗಳು ಹರಡುತ್ತವೆ. ಸರಿಯಾಗಿ ಕೈಗಳನ್ನು ತೊಳೆಯುವ ಅಭ್ಯಾಸ ನಿಮ್ಮದಾಗದಿದ್ದರೆ ಅನಾರೋಗ್ಯಕ್ಕೆ



ತುತ್ತಾಗುತ್ತೀರಾ. ನೀರಿನ ಶುದ್ಧತೆ ಮತ್ತು ಸುತ್ತಮುತ್ತಲ ಪರಿಸರ ಸ್ವಚ್ಛತೆ ಕಾಪಾಡುವ ಮೂಲಕ ಆರೋಗ್ಯಕರ ಸುಸ್ಥಿರ ಪರಿಸರ ನಿರ್ಮಿಸೋಣ ಎಂದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಪ್ರತಿ ವರ್ಷ ಜೂನ್ 5ರಂದು ವಿಶ್ವ ಪರಿಸರ ದಿನ ಜನ ಜಾಗೃತಿ ಮೂಡಿಸುವ ಸಲುವಾಗಿ, ಇದರಿಂದ ಸುಧಾರಿತ ಜೀವನಶೈಲಿ ರೂಪಿಸುವ ಸದುದ್ದೇಶವಿದೆ. ಈ ಬಾರಿಯ ವಿಶ್ವ ಪರಿಸರ ದಿನದ ಘೋಷವಾಕ್ಯ ಭೂಮಿ ಮರುಸ್ಥಾಪನೆ, ಮರುಭೂಮೀಕರಣ ಹಾಗೂಬರಸ್ಥಿತಿಸ್ಥಾಪಕತ್ವವಾಗಿದೆಎಂದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಆರೋಗ್ಯ ಕೇಂದ್ರಗಳಲ್ಲಿ ಸೋಲಾರ್ ಸೌಲಭ್ಯ ಅಳವಡಿಕೆ, ದ್ರವರೂಪದ ಜೈವಿಕ ವೈದ್ಯಕೀಯ ತ್ಯಾಜ್ಯಗಳ ಸಮರ್ಪಕ ನಿರ್ವಹಣೆ ಮತ್ತು ವಿಲೇವಾರಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳ ಆವರಣದಲ್ಲಿ ಪಾಳು ಭೂಮಿಯ ಸೂಕ್ತ ನಿರ್ವಹಣೆ ಮಾಡುವ ಮೂಲಕ ಪರಿಸರ ಜಾಗೃತಿ ಮೂಡಿಸಲಾಗುವುದು ಎಂದರು.

ಮುದ್ದಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಸಿಗಳನ್ನು ನೆಟ್ಟು ನಂತರ ಸರ್ಕಾರಿ ಶಾಲೆ ಆವರಣದ ಸ್ವಚ್ಛತೆ ಮತ್ತು ಮಲೇರಿಯಾ ವಿರೋಧಿ ಮಾಸಾಚರಣೆ ಪ್ರಯುಕ್ತ ಗ್ರಾಮದಲ್ಲಿ ಮಕ್ಕಳಿಂದ ಜಾಗೃತಿ ಜಾಥಾ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ಸುರೇಶ್ ಬಾಬು, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಅಭಿಷೇಕ್, ಕ್ಷೇತ್ರಆರೋಗ್ಯಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ರಂಗಾರೆಡ್ಡಿ, ರಾಮಪ್ಪ, ಮಲ್ಲಿಕಾರ್ಜುನ, ನಾಗರಾಜ್, ರೇಣುಕಾಸ್ವಾಮಿ, ಮಂಜುನಾಥ, ಕಿರಣ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಲತಾ, ಶಾಲಾ ಶಿಕ್ಷಕರಾದ ಲಲಿತಮ್ಮ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಏಕಲವ್ಯ ಮಾದರಿ ವಸತಿ ಶಾಲೆ ಪಿಯು ಪ್ರವೇಶಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ದೇವರಕೊಟ್ಟ ಏಕಲವ್ಯ ಮಾದರಿ ವಸತಿ ಶಾಲೆಯ 2024–25ನೇ ಸಾಲಿಗೆ ಪ್ರಥಮ ಪಿಯುಸಿ ವಾಣಿಜ್ಯ ಸಂಯೋಜನೆಯ (ಇಬಿಎಸಿ) ಖಾಲಿ ಸ್ಥಾನಗಳ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರುವ ಪರಿಶಿಷ್ಟ ವರ್ಗದ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿಗಳನ್ನು ದೇವರಕೊಟ್ಟ ಏಕಲವ್ಯ ಮಾದರಿ ವಸತಿ ಶಾಲೆಯಲ್ಲಿ ಪಡೆದು, ಅಗತ್ಯ ದಾಖಲೆಗಳೊಂದಿಗೆ ಜೂನ್ 13 ರ ಒಳಗಾಗಿ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಟಿ.ಪ್ರವೀಣ್ ಕುಮಾರ್ ದೂರವಾಣಿ ಸಂಖ್ಯೆ 9900557357 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಮೊರಾರ್ಜಿ ದೇಸಾಯಿ ವಸತಿ ಶಾಲಾ ಆಯ್ಕೆಗಾಗಿ ಕರೆದಿರುವ ಕೌನ್ಸಿಲಿಂಗ್ ದಿನಾಂಕ ಮುಂದೂಡಿಕೆ

» ದಾವಣಗೆರೆ

ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು ಹಾಗೂ ಡಾ॥ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ 2024–25ನೇ ಸಾಲಿನ 6ನೇ ತರಗತಿ ಪ್ರವೇಶಕ್ಕಾಗಿ ಪ್ರವೇಶ ಪರೀಕ್ಷೆಯನ್ನು ನಡೆಸಲಾಗಿದ್ದು, ಈ ಪರೀಕ್ಷೆಯಲ್ಲಿ ಆಯ್ಕೆಯಾದ ತಾತ್ಕಾಲಿಕ ವಿದ್ಯಾರ್ಥಿಗಳ ಪಟ್ಟಿಯನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ನಂ. 44, 'ಎ' ಬ್ಲಾಕ್, 2ನೇ ಮಹಡಿ, ಜಿಲ್ಲಾಡಳಿತ ಭವನ, ಕರೂರು ಕ್ರಾಸ್, ಹರಿಹರ ರಸ್ತೆ, ದಾವಣಗೆರೆ ಇಲ್ಲಿ ಪ್ರಕಟಿಸಲಾಗಿರುತ್ತದೆ. ಈ ಪಟ್ಟಿಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳನ್ನು ಶಾಲಾ ಆಯ್ಕೆಗಾಗಿ ಕರೆದಿರುವ ಕೌನ್ಸಿಲಿಂಗ್ ದಿನಾಂಕಗಳನ್ನು ನಿರ್ದೇಶನಾಲಯದ ಮುಂದಿನ ಪರಿಷ್ಕೃತ ಪಟ್ಟಿಯು (ಆಯ್ಕೆ ಪಟ್ಟಿ) ಬರುವವರೆಗೂ ಮುಂದೂಡಲಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08192–250022 ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.

### ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಕೇಂದ್ರ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದಿಂದ ಪ್ರಸಕ್ತ ಸಾಲಿನ ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ ಹಾಗೂ ನೂತನ ಅವಿಷ್ಕಾರಗಳಲ್ಲಿ ಉತ್ತಮ ಸಾಧನೆ ಮಾಡಿದ 5 ವರ್ಷ ಮೇಲ್ಪಟ್ಟ 18 ವರ್ಷದೊಳಗಿನವರು ಅರ್ಜಿ ಸಲ್ಲಿಸಬಹುದು. ನ್ಯಾಷನಲ್ ಅವಾರ್ಡ್ ಪೋರ್ಟಲ್ ನಲ್ಲಿ ಆನ್ ಲೈನ್ ವೆಬ್ ಸೈಟ್ https://awards.gov.in ಮೂಲಕ ಅರ್ಜಿ ಸಲ್ಲಿಸಬಹುದು ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08192–222701, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿ.ಹೆಚ್ ಪಟೇಲ್ ಬಡಾವಣೆ, ಜಿಲ್ಲಾ ಬಾಲಭವನ, ದಾವಣಗೆರೆ ಇಲ್ಲಿ ಸಂಪರ್ಕಿಸಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ ತಿಳಿಸಿದ್ದಾರೆ.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



# ಶಿಕ್ಷಣವೇ ಶಕ್ತಿ ಎಂಬ ನಾಣ್ನುಡಿಗೆ ಶಕ್ತಿ ತುಂಬಿದವರು ನಾಲ್ವಡಿ ಕೃಷ್ಣರಾಜ ಒಡೆಯರು

» **ಚಿತ್ರದುರ್ಗ**

ಶಿಕ್ಷಣವೇ ಶಕ್ತಿ ಎಂಬ ನಾಣ್ನುಡಿಗೆ ಶಕ್ತಿ ತುಂಬಿದವರು ನಾಲ್ವಡಿ ಕೃಷ್ಣರಾಜ ಒಡೆಯರು ಎಂದು ಕುಂಚಿಟಿಗ ಗುರುಪೀಠದ ಜಗದ್ಗುರು ಶ್ರೀ ಶಾಂತವೀರ ಸ್ವಾಮೀಜಿ ವಿಶ್ಲೇಷಿಸಿದರು.

ಚಿತ್ರದುರ್ಗ ನಗರದ ಹೊರವಲಯದಲ್ಲಿರುವ ಶ್ರೀ ಜಗದ್ಗುರು ಸಿದ್ದರಾಮೇಶ್ವರ ಮಹಾಸಂಸ್ಥಾನ, ಭೋವಿ ಗುರುಪೀಠದಲ್ಲಿ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ ಜಯಂತಿಯಲ್ಲಿ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು ಅಸ್ಪೃಶ್ಯರ ಶಿಕ್ಷಣಕ್ಕೆ ಅವಕಾಶ ಕಲ್ಪಿಸಿದ ಅವರು, ಶಿಕ್ಷಣವೇ ಎಲ್ಲರ ಅಭಿವೃದ್ಧಿಗೂ ಮೂಲ ಎಂದು ಭಾವಿಸಿ, ಶಿಕ್ಷಣಕ್ಕೆ ಹೆಚ್ಚು ಒತ್ತುಕೊಟ್ಟಿದ್ದರು. ಮೈಸೂರು ವಿಶ್ವವಿದ್ಯಾನಿಲಯ ಪ್ರಾರಂಭಿಸಿದರು. ಬೆಂಗಳೂರಿನಲ್ಲಿ ಕೃಷಿ ವಿ.ವಿ ಸ್ಥಾಪಿಸಿದರು. ಎಸ್.ಎಸ್.ಎಲ್.ಸಿ. ಪರೀಕ್ಷೆ ಆರಂಭಕ್ಕೆ ಕಾರಣೀಭೂತರಾದರು. ಕಡ್ಡಾಯ ಪ್ರಾಥಮಿಕ ಶಿಕ್ಷಣ ಕಾಯಿದೆ ಜಾರಿ, ವಯಸ್ಕರಿಗಾಗಿ ವಯಸ್ಕರ ಶಾಲೆ.

ಪ್ರಜೆಗಳ ಸಮಸ್ಯೆಯನ್ನು ಆಲಿಸಲು ಪ್ರಜಾಪ್ರತಿನಿಧಿ ಸಭೆಯನ್ನು ಬಲಗೊಳಿಸಿ, ನ್ಯಾಯವಿಧಾಯಕ ಸಭೆಯನ್ನು ಸ್ಥಾಪಿಸಿದರು. ಸಾಮಾಜಿಕ ನ್ಯಾಯದ ಪರ ಮಹಾರಾಜರ ನಿಲುವು ಯಾವಾಗಲು ಹೆಚ್ಚಾಗಿತ್ತು. ಮೈಸೂರಿನಲ್ಲಿ ನಡೆದ ಮೀಸಲಾತಿ ಚಳುವಳಿ, ಇತಿಹಾಸದಲ್ಲೇ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹದ್ದು. ಮಿಲ್ಲರ್ ಆಯೋಗದ ಶಿಫಾರಸ್ಸಿನಂತೆ, ಬ್ರಾಹ್ಮಣೇತರರಿಗೆ ಶೇ 75% ಮೀಸಲಾತಿ ನೀಡಿ ಹೊಸ ಶಕೆಗೆ ಮುನ್ನುಡಿಯನ್ನಿಟ್ಟರು ನಾಲ್ವಡಿಯವರು.

ತಮ್ಮ ಕಾಲಾವಧಿಯನ್ನು ದೇವದಾಸಿ ಪದ್ದತಿಯನ್ನು ನಿರ್ಮೂಲನೆಗೊಳಿಸಿದ್ದು, ಗೆಜ್ಜೆಪೂಜೆಕಾರ್ಯಕ್ರಮವನ್ನುನಿಷೇಧಿಸಿದ್ದು, ವಿಧವಾ ಶಿಕ್ಷಣಕ್ಕೆ ಪ್ರೋತ್ಸಾಹಿಸಿದ್ದು, ಮಹಿಳೆಯರಿಗೂ ಪಿತ್ರಾರ್ಜಿತ ಆಸ್ತಿಯಲ್ಲಿ ಪಾಲು ನೀಡಲು ಕಾನೂನು ರೂಪಿಸಿದ್ದು.. ಹೀಗೆ ಮಹಾರಾಜರು ಸಾಮಾಜಿಕ ಕಳಕಳಿಯಿಂದ ಕೈಗೊಂಡ ಕ್ರಮಗಳು ಅನೇಕ.



ಒಂದರ ಹಿಂದೆ ಒಂದರಂತೆ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸೇವೆ ಅಪರಿಮಿತ ಎಂದು ವಿಶ್ಲೇಷಿಸಿದರು.

ಮಡಿವಾಳ ಗುರುಪೀಠದ ಜಗದ್ಗುರು ಶ್ರೀ ಬಸವ ಮಾಚಿದೇವ ಸ್ವಾಮೀಜಿ ಮಾತನಾಡಿ ಆಡು ಮುಟ್ಟದ ಸೊಪ್ಪಿಲ್ಲ ಅನ್ನೋ ಮಾತು ಎಷ್ಟು ನಿಜವೋ ನಾಲ್ವಡಿ ಕೃಷ್ಣರಾಜ ಒಡೆಯರ್ ಕೊಡುಗೆ ನೀಡದ ಕ್ಷೇತ್ರವೇ ಇಲ್ಲ ಅನ್ನೋದು ಅಷ್ಟೇ ಸತ್ಯ. ಮೈಸೂರಿನ ಸುವರ್ಣ ಯುಗಕ್ಕೆ ಕಾರಣರಾದವರು ನಾಲ್ವಡಿ ಕೃಷ್ಣರಾಜ ಒಡೆಯರ್. ಮೈಸೂರು ಸಂಸ್ಥಾನದ ಒಡೆಯರ್ ರಾಜಸಂತತಿಯಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತ ಸರ್ವಶ್ರೇಷ್ಟವಾದದ್ದು. ಅಂದು ರಾಜರು ಇಂದು ರಾಜಕಾರಣಿಗಳು ಜನರನ್ನು ಆಳುತ್ತಿದ್ದಾರೆ ಜನನಾಯಕ ಅಂದ್ರೆ ಒಡೆಯರ್ ರೀತಿಯಲ್ಲಿ ಇರಬೇಕು. ಜಗತ್ತಿಗೆ ತೋರಿಸಿಕೊಟ್ಟ ಇವರ ಕೊಡುಗೆಗಳು ಅಜರಾಮರ ಎಂದು ಹೇಳಿದರು.

ಹರಿಹರ ಪಂಚಮಸಾಲಿ ಜಗದ್ಗುರು ಪೀಠದ ಶ್ರೀ ಜಗದ್ಗುರು ವಚನಾನಂದ ಸ್ವಾಮೀಜಿ ಮಾತನಾಡಿ ನಾಲ್ವಡಿ ಕೃಷ್ಣರಾಜ ಒಡೆಯರ್ ಯೋಗದ ಅನೇಕ ಪ್ರಯೋಜನಗಳನ್ನು ಗುರುತಿಸಿ, ಮಹಾರಾಜರು ಶ್ರೀ ಟಿ.ಕೃಷ್ಣಮಾಚಾರ್ಯರನ್ನು ಪ್ರೋತ್ಸಾಹಿಸಿದರು, ಅವರು ಪಟ್ಟಾಭಿ ಜೋಯಿಸ್ ಮತ್ತು ಬಿಕೆಎಸ್ ಅಯ್ಯಂಗಾರ್ ಅವರಿಗೆ ತರಬೇತಿ ನೀಡಿದರು.

ಕೃಷ್ಣರಾಜ ಒಡೆಯರ್ ಅವರು ಪಿಟೀಲು, ಕೊಳಲು, ಸಿತಾರ್, ವೀಣೆ, ಸ್ಯಾಕ್ಸೋಫೋನ್,ಮೃದಂಗಂ,ಪಿಯಾನೋ ಮತ್ತು ನಾದಸ್ವರಂ ಸೇರಿದಂತೆ ಹಲವಾರು ಸಂಗೀತ ವಾದ್ಯಗಳನ್ನು ನುಡಿಸಬಲ್ಲರು. ಅವರ ಪೂರ್ವವರ್ತಿಗಳಂತೆ, ಅವರು ಹಲವಾರು ಹಿಂದೂಸ್ತಾನಿ, ಕರ್ನಾಟಕ ಮತ್ತು ಪಾಶ್ಚಿಮಾತ್ಯ ಕಲಾವಿದರನ್ನು ಪೋಷಿಸಿದರು. ಮೈಸೂರು ಮಹಾರಾಜರ ಕೆಲವು ಗೌರವಾನ್ವಿತ ಅತಿಥಿಗಳಲ್ಲಿ ಗೌಹರ್ ಜಾನ್, ಅಬ್ದುಲ್ ಕರೀಂ ಖಾನ್ ಮತ್ತು ಆಗ್ರಾ ಘರಾನಾದ ಸದಸ್ಯರು– ಉಸ್ತಾದ್ ವಿಲಾಯತ್ ಹುಸೇನ್ ಖಾನ್ ಮತ್ತು ನಟ್ಟನ್ ಖಾನ್ ಸೇರಿದ್ದಾರೆ. ಬರ್ಕತುಲ್ಲಾ ಖಾನ್ ಅವರು ಅರಮನೆಯಲ್ಲಿ ಸಂಗೀತಗಾರರಾಗಿದ್ದರು. ಕನ್ನಡ ಮತ್ತು ಸಂಸ್ಕೃತ ಸಾಹಿತ್ಯದ ಪ್ರಚಾರಕ್ಕಾಗಿ ಮಹಾರಾಜರು ಸಹ ಗುರುತಿಸಲ್ಪಟ್ಟರು ಎಂದು ತಿಳಿಸಿದರು.

ವಾಲ್ಮೀಕಿ ಗುರುಪೀಠದ ಜಗದ್ಗುರು ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ ಮಾತನಾಡಿ ಕನ್ನಡ ನಾಡಿನ ಪ್ರಾತಃ ಸ್ಮರಣೀಯ ವ್ಯಕ್ತಿಗಳಲ್ಲಿ ಒಬ್ಬರು ಆಧುನಿಕ ಕನ್ನಡ ನಾಡಿನ ನಿರ್ಮಾತೃ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್. ಇಂದು ನಮ್ಮ ರಾಜ್ಯ ರಾಜಧಾನಿ ಬೆಂಗಳೂರನ್ನು ಭಾರತದ ಸಿಲಿಕಾನ್ ವ್ಯಾಲಿ ಎಂದು ಕರೆಯಲಾಗುತ್ತದೆ. ವಿಶ್ವದಾದ್ಯಂತ ಬೆಂಗಳೂರು ಸಾಕಷ್ಟು ಪ್ರಸಿದ್ಧಿ ಪಡೆದಿದೆ. ದೇಶ ಯುವಜನರು ಉದ್ಯೋಗಾವಕಾಶಗಳನ್ನು ಅರಸುವಾಗ ಅವರ ಮನಸ್ಸಿನಲ್ಲಿ ಮೂಡುವುದು ಮೊದಲಿಗೆ ಬೆಂಗಳೂರಿನ ಹೆಸರು. ಮಾಹಿತಿ ತಂತ್ರಜ್ಞಾನ, ಕೈಗಾರಿಕೆಗಳು, ಸ್ಟಾರ್ಟ್ ಅಪ್, ಶೈಕ್ಷಣಿಕ ವಲಯ ಹೀಗೆ ಬೆಂಗಳೂರು ಹತ್ತು ಹಲವು ಕ್ಷೇತ್ರಗಳಲ್ಲಿ ಇಂದು ವಿಶ್ವವ್ಯಾಪ್ತಿಯಾಗಿದೆ. ಆದರೆ ಈ ಸಾಧನೆ ಕೇವಲ ಒಂದೆರಡು ದಶಕಗಳಲ್ಲಿ ಸಾಧನೆಯಾದದ್ದಲ್ಲ. ಅದರ ಹಿಂದೆ ನೂರಾರು ವರ್ಷಗಳ ಪರಿಶ್ರಮವಿದೆ. ಈ ಎಲ್ಲವೂ ಮೈಸೂರಿನ ಪ್ರಸಿದ್ಧ ಮಹಾರಾಜರಾಗಿದ್ದ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಹಾಕಿದ ಅಡಿಪಾಯದ ಮೇಲೆ ಎದ್ದು ನಿಂತಿರುವ ಭವ್ಯ ಸೌಧವಾಗಿದೆ ಎಂದು ಬಣ್ಣಿಸಿದರು.

ಯಾದವ ಮಹಾಸಂಸ್ಥಾನ ಮಠದ ಜಗದ್ಗುರು ಶ್ರೀಕೃಷ್ಣ ಯಾದವಾನಂದ ಸ್ವಾಮೀಜಿ ಮಾತನಾಡಿ ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವಾಗಿ ರೂಪಿಸಿದ ನಾಲ್ವಡಿಯವರನ್ನ ವಿದ್ವಾಂಸರು, ಶಿಕ್ಷಣ ತಜ್ಞರು, ಇತಿಹಾಸಕಾರರು 'ಸಾಮಾಜಿಕಕಾನೂನುಗಳಹರಿಕಾರ'ಎಂದು ಕರೆದಿದ್ದಾರೆ. ಗಾಂಧೀಜಿಯವರಿಂದಲೇ 'ರಾಜರ್ಷಿ' ಎಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಂಸೆ ಪಡೆದಿದ್ದರು. ಒಡೆಯರ್ ಕೊಡುಗೆ ನೀಡದ ಕ್ಷೇತ್ರಗಳೇ ಇಲ್ಲ. ಕೃಷಿ, ಕೈಗಾರಿಕೆ, ನೀರಾವರಿ, ಜಲ ವಿದ್ಯುತ್, ಶಿಕ್ಷಣ, ಆರೋಗ್ಯ ಸೇರಿದಂತೆ ಹಲವು ವಲಯಗಳಲ್ಲಿ ಅಂದಿನ ಮೈಸೂರು ರಾಜ್ಯ ಮುಂಚೂಣಿಯಲ್ಲಿತ್ತು. ಇದರ ಹಿಂದೆ ಇವರ ಕೊಡುಗೆ ಅಪಾರವಾಗಿತ್ತು ಎಂದು ತಿಳಿಸಿದರು.

ಸಭೆಯಲ್ಲಿ ಭೋವಿ ಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಈಡಿಗ ಗುರುಪೀಠದ ಜಗದ್ಗುರು ಶ್ರೀ ರೇಣುಕಾನಂದ ಸ್ವಾಮೀಜಿ, ಮೇದಾರ ಗುರುಪೀಠದ ಶ್ರೀ ಇಮ್ಮಡಿ ಬಸವಪ್ರಭು ಕೇತೇಶ್ವರ ಸ್ವಾಮೀಜಿ, ಕುಂಬಾರ ಗುರುಪೀಠದ ಜಗದ್ಗುರು ಶ್ರೀ ಬಸವ ಗುಂಡಯ್ಯ ಸ್ವಾಮೀಜಿ, ಶಿವಮೊಗ್ಗದ ಬಸವ ಮರುಳಸಿದ್ಧ ಸ್ವಾಮೀಜಿ, ಶಿಕಾರಿಪುರ ಚನ್ನಬಸವ ಸ್ವಾಮೀಜಿ, ಹಾವೇರಿ ಬಸವ ಶಾಂತಲಿಂಗ ಸ್ವಾಮೀಜಿ, ಸಿರಗುಪ್ಪ ಬಸವ ಭೂಷಣ ಸ್ವಾಮೀಜಿ, ಕೊರಟಗೆರೆ ಮಹಾಲಿಂಗ ಸ್ವಾಮೀಜಿ, ನೆಲಮಂಗಲ ಡಾ.ರಮಾನಂದ ಸ್ವಾಮೀಜಿ, ತುಮಕೂರಿನ ತಿಪ್ಪೇರುದ್ರ ಸ್ವಾಮೀಜಿ, ಬೆಳಗಾವಿ ಜಯದೇವ ಸ್ವಾಮೀಜಿ ಗೌರವ ಉಪಸ್ಥಿತಿಯಿದ್ದರು.

ಇದೇ ಸಂದರ್ಭದಲ್ಲಿ ಮಡಿವಾಳ ಜಗದ್ಗುರುಗಳ 40ನೇ ಜನ್ಮದಿನೋತ್ಸವದ ಶುಭಾಶಯಗಳನ್ನು ಶ್ರೀಗಳ ತಂಡ ತಿಳಿಸಿದರು.

ಜಿಲ್ಲಾ ಬಾಲ ಭವನದಲ್ಲಿ ವಿಶ್ವ ಪರಿಸರ ದಿನಾಚರಣೆ.

# ನೈಸರ್ಗಿಕ ಸಂಪನ್ಮೂಲ ಉಳಿಸುವ ನಿಟ್ಟಿನಲ್ಲಿ ಯೋಚಿಸಿ

» **ಚಿತ್ರದುರ್ಗ**

ನೈಸರ್ಗಿಕ ಸಂಪನ್ಮೂಲಗಳನ್ನು ಉಳಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಯೋಚಿಸಬೇಕಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಹೇಳಿದರು. ನಗರದ ಜಿಲ್ಲಾ ಬಾಲಭವನದ ಆವರಣದಲ್ಲಿ ಬುಧವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ಬಾಲ ಭವನ ಸಮಿತಿ ಇವರ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿ ನೆಡುವ ಕಾರ್ಯಮದಲ್ಲಿ ಮಾತನಾಡಿದರು.

ಪ್ರಕೃತಿ ಸಂಪನ್ಮೂಲಗಳು ಅತ್ಯಂತ ಬೆಲೆ ಕಟ್ಟಲಾಗದಂತಹ ಸಂಪನ್ಮೂಲವಾಗಿದೆ. ಈ ಸಂಪನ್ಮೂಲ ಉಳಿಸಿಕೊಳ್ಳಲು ಪರಿಸರ ಸ್ವಚ್ಛವಾಗಿಟ್ಟುಕೊಳ್ಳಬೇಕು. ಪರಿಸರದಿನಾಚರಣೆಯಅಂಗವಾಗಿ ಜಿಲ್ಲಾ ಬಾಲಭವನ ಹಾಗೂ ಜಿಲ್ಲೆಯ ವಿವಿಧ ಅಂಗನವಾಡಿಗಳ ಆವರಣದಲ್ಲಿ ವಿವಿಧ ಜಾತಿಗಳ ಸಸಿಗಳನ್ನು ನೆಡುವುದರ ಮೂಲಕ ವಿಶ್ವ ಪರಿಸರ ದಿನಾಚರಣೆ ಆಚರಿಸುತ್ತಿದ್ದೇವೆ. ಸಸಿಗಳನ್ನು ಶಿಶುವಿನಂತೆ ಕಾಪಾಡಿದರೆ ಮುಂದೆ ಹೆಮ್ಮರವಾಗಿ ಮುಂದಿನ ಪೀಳಿಗೆಗೆ ಉತ್ತಮ ಪರಿಸರ ನೀಡುತ್ತವೆ. ಪರಿಸರ ಸಂರಕ್ಷಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.



ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ ಮಾತನಾಡಿ, ಆಧುನಿಕ ಜೀವನ ಶೈಲಿಯಲ್ಲಿ ಪ್ರಕೃತಿ ಸಂಪನ್ಮೂಲ ನಾಶವಾಗುತ್ತಿದೆ. ಪ್ರಕೃತಿಯನ್ನು ಕಾಪಾಡಬೇಕಾಗಿದೆ ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಪರಿಸರ ದಿನಾಚರಣೆಯನ್ನು ಆಚರಿಸುವುದರ ಮೂಲಕ ಸಸ್ಯ ಸಂಕುಲ ಬೆಳೆಸಬೇಕಾಗಿದೆ ಎಂದರು.ಚಿತ್ರದುರ್ಗ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ ಮಾತನಾಡಿ, ಪ್ರಕೃತಿ ಸಂಪನ್ಮೂಲ ದೈವ ಕೊಟ್ಟ ವರ ಅದನ್ನು ಸಂರಕ್ಷಿಸುವುದು ಪ್ರತಿಯೊಬ್ಬ ನಾಗರಿಕರಿಗೆ ಜವಾಬ್ದಾರಿ.ನಾವೆಲ್ಲರೂ ಸಸಿಗಳನ್ನು ಬೆಳೆಸುವುದರ ಮೂಲಕ ಪರಿಸರ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಬೇಕಾಗಿದೆ ಎಂದರುಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಜಿಲ್ಲಾ ಬಾಲ ಭವನದ ವ್ಯವಸ್ಥಾಪಕ ಸುರೇಶ್, ಕಚೇರಿಯ ವ್ಯವಸ್ಥಾಪಕ ರುದ್ರಪ್ಪ ಪ್ರಮೋದ್ ಕುಮಾರ್, ಸಾಧಿಕ್ ಉಲ್ಲಾ, ಸಹಾಯಕ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳಾದ ದಾಸಪ್ಪ, ಜಿಲ್ಲಾ ಬಾಲಭವನ ಕಾರ್ಯಕ್ರಮ ಸಂಯೋಜಕರಾದ ಡಿ ಶ್ರೀಕುಮಾರ್, ಸಿಬ್ಬಂದಿಗಳಾದ. ಪಿ.ಜಿ ರವೀಂದ್ರ., ವಿನಯ್ ಕುಮಾರ್, ದೀಪ, ಗೀತಾ, ಅರುಂಧತಿ, ಚೇತನ್, ಪ್ರೇಮ, ಭಾಗ್ಯಮ್ಮ, ಅನಿಲ್ ಕುಮಾರ್ ಮುಂತಾದವರು ಉಪಸ್ಥಿತರಿದ್ದರು.

# ದೇವಪುರ ಗ್ರಾ.ಪಂ: ಪರಿಸರ ದಿನ ಆಚರಣೆ



» **ಚಿತ್ರದುರ್ಗ**

ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ದೇವಪುರ ಗ್ರಾಮ ಪಂಚಾಯಿತಿ ಆವರಣದಲ್ಲಿ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ನಂದಿನಿ ಅವರು ಗಿಡ ನೆಡುವುದರ ಮೂಲಕ ವಿಶ್ವ ಪರಿಸರ ದಿನ ಆಚರಿಸಲಾಯಿತು. ಈ ಸಂದರ್ಭದಲ್ಲಿ ಜಿ.ಪಂ ಸ್ವಚ್ಛ ಭಾರತ್ ಮಿಷನ್ (ಗ್ರಾ) ವಿಷಯ ನಿರ್ವಾಹಕರು, ಸ್ವಚ್ಛಭಾರತ್ ಮಿಷನ್ (ಗ್ರಾ) ಹೆಚ್‌ಆರ್‌ಡಿ ಸಮಾಲೋಚಕ ವಿನಯ್‌ಕುಮಾರ್, ದೇವಪುರ ಗ್ರಾಮ ಪಂಚಾಯಿತಿ ಪಿಡಿಒ, ಸಿಬ್ಬಂದಿ ಇದ್ದರು.

**ಪ್ರಮುಖ ಸುದ್ದಿ**

ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ ಸಲಹೆ

# ಸಸ್ಯ ಮೂಲದ ಚಿಕಿತ್ಸೆಗೆ ನೋಂದಾಯಿತ ವೈದ್ಯರನ್ನೇ ಸಂಪರ್ಕಿಸಿ

» **ಚಿತ್ರದುರ್ಗ**

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ರಂಗೇನಹಳ್ಳಿ ಗ್ರಾಮದ ಯುವತಿಯು ಯಾವುದೋ ಗಿಡವನ್ನು ಔಷಧಿಸಸ್ಯ ಎಂದು ತಪ್ಪಾಗಿ ಭಾವಿಸಿ ಸೇವಿಸಿ, ಅದರ ದುಷ್ಪರಿಣಾಮದಿಂದ ಮೃತ ಹೊಂದಿರುವುದು ಇತ್ತೀಚೆಗೆ ಮಾಧ್ಯಮಗಳಲ್ಲಿ ವರದಿಯಾಗಿತ್ತು. ಈ ಹಿನ್ನೆಲೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ ಅವರು ರಂಗೇನಹಳ್ಳಿ ಗ್ರಾಮದ ಸಂತ್ರಸ್ಥರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಿದರು.

ಗಿಡಮೂಲಿಕೆ ಔಷಧಿ ಚಿಕಿತ್ಸೆ ಬೇಕಾದಲ್ಲಿ ಹತ್ತಿರದ ಆಯುಷ್ ಚಿಕಿತ್ಸಾಲಯ ಅಥವಾ ಆಸ್ಪತ್ರೆಗಳಿಗೆ ಭೇಟಿ ನೀಡಿ ಅಲ್ಲಿ ಇರುವಂತಹ ಪದವಿಧರ ಆಯುಷ್ ವೈದ್ಯರಿಂದಲೇ ಚಿಕಿತ್ಸೆ ಪಡೆಯಲು ಸೂಚಿಸಿದರು. ಆಯುರ್ವೇದ ಚಿಕಿತ್ಸೆ ಬೇಕಾದಲ್ಲಿ ನೋಂದಾಯಿತ ಆಯುರ್ವೇದ ವೈದ್ಯರಿಂದಲೇ ಗಿಡಮೂಲಿಕೆಗಳ ಚಿಕಿತ್ಸೆ ಪಡೆಯಬೇಕು. ಇತ್ತೀಚಿನ ವೈಜ್ಞಾನಿಕ ಬೆಳವಣಿಗೆಗಳಿಂದಾಗಿ ಆಯುರ್ವೇದ ಔಷಧಿಗಳುಗಳನ್ನು ಕಷಾಯ, ಚೂರ್ಣ, ಸ್ವರಸ ಇತ್ಯಾದಿ ರೂಪದಲ್ಲಿ ತಯಾರಿಸಬೇಕಾದ ಅವಶ್ಯಕತೆ ಇಲ್ಲ. ಆಧುನಿಕ ಔಷಧಿಗಳಂತೆ ಗಿಡಮೂಲಿಕೆ ಔಷಧಿಗಳೂ ಮಾತ್ರೆ, ಕ್ಯಾಪ್ಸುಲ್, ಟಾನಿಕ್‌ಗಳ ರೂಪದಲ್ಲಿ ವೈಜ್ಞಾನಿಕವಾಗಿ, ಸುರಕ್ಷಿತವಾಗಿ, ಸ್ವಚ್ಛವಾಗಿ ಸರ್ಕಾರದ ಜಿಎಂಪಿ ಮಾನದಂಡಗಳ ಅನುಸಾರ ತಯಾರಿಸಲ್ಪಟ್ಟು ಗ್ರಾಹಕರಿಗೆ ದೊರೆಯುತ್ತವೆ. ಇವುಗಳನ್ನು ಬಳಸುವುದು ಸುಲಭ ಹಾಗೂ ಸುರಕ್ಷಿತ ಎಂದು ತಿಳಿಸಿದರು. ನಾಟಿವೈದ್ಯಕ್ಕಿಂತ ಆಯುರ್ವೇದ ವೈದ್ಯ ಪದ್ಧತಿಯು ಅತ್ಯಂತ ವೈಜ್ಞಾನಿಕವಾಗಿದ್ದು, ಅತ್ಯಂತ ಸುರಕ್ಷಿತವಾಗಿದೆ. ಕೆಲವೊಮ್ಮೆ ಗಿಡದ ಎಲೆಗಳು ಒಂದೇ ತರನಾಗಿದ್ದು, ಔಷಧಿ ಸಸ್ಯವನ್ನು ಗುರುತಿಸುವುದು ಕಷ್ಟವಾಗುತ್ತದೆ. ಅಂತ ಸಮಯದಲ್ಲಿ ಹತ್ತಿರದ ಆಯುರ್ವೇದ ವೈದ್ಯಾಧಿಕಾರಿಗಳನ್ನು ಭೇಟಿ ಮಾಡಿ ಆ ಗಿಡವು ಸುರಕ್ಷಿತವೇ ಇಲ್ಲವೇ ಎಂಬುದನ್ನು ಖಾತ್ರಿಪಡಿಸಿಕೊಂಡು ನಂತರ ಔಷಧಿಯಾಗಿ ಬಳಸಬೇಕು. ಮನೆಮದ್ದು ಹಾಗೂ ಔಷಧಿ ಸಸ್ಯಗಳನ್ನು ಬಳಸುವುದಾದರೆ ಅದರ ಬಗ್ಗೆ ಪೂರ್ಣ ತಿಳುವಳಿಕೆಇರುವವರಮೇಲ್ವಿಚಾರಣೆಯಲ್ಲಿ ಸೇವಿಸಬೇಕು. ಸಾಮಾನ್ಯವಾಗಿ ಸಾರ್ವಜನಿಕರು ತಿಳಿದುಕೊಂಡಂತೆ ಎಲ್ಲಾ ಗಿಡಗಳು ಆರೋಗ್ಯಕ್ಕೆ ಪೂರಕವಾಗಿ ಸುರಕ್ಷಿತವಾಗಿ ಇರುವುದಿಲ್ಲ. ಸರಿಯಾದ ವಿಧಾನದಲ್ಲಿ ಸರಿಯಾದ ಪ್ರಮಾಣದಲ್ಲಿ ಸೇವಿಸದಿದ್ದರೆ ಹಾಗೂ ವಿವೇಚನಾ ರಹಿತವಾಗಿ ಸೇವಿಸಿದರೆ ಅಪಾಯ ತಪ್ಪಿದ್ದಲ್ಲ. ಆಯುರ್ವೇದ ಚಿಕಿತ್ಸೆಗಳು ಸರ್ಕಾರದವತಿಯಿಂದಲೇ ಆಯುಷ್ ಚಿಕಿತ್ಸಾಲಯಗಳಲ್ಲಿ ಉಚಿತವಾಗಿ ಲಭ್ಯ ಇವೆ ಇವುಗಳ ಪ್ರಯೋಜನವನ್ನು ಪಡೆದುಕೊಳ್ಳಬೇಕು ಎಂದರು. ಎಲ್ಲಾ ಗಿಡಮೂಲಿಕೆಗಳು ಆಯುರ್ವೇದ ಔಷಧಿ ಎನಿಸಿಕೊಳ್ಳುವುದಿಲ್ಲ. ಕೆಲವೊಂದು ಗಿಡಗಳನ್ನು ಮಾತ್ರ ಸುರಕ್ಷಿತವಾಗಿ ಔಷಧಿಯಾಗಿ ಬಳಸಬಹುದು. ಸಾರ್ವಜನಿಕರು ಜಾಗರೂಕರಾಗಿ ಇರಬೇಕು. ನೋಂದಾಯಿತ ಆಯರ್ವೇದ ವೈದ್ಯರಿಂದಲೇ ಸಸ್ಯಮೂಲದ ಚಿಕಿತ್ಸೆ ಪಡೆಯಬೇಕೆಂದು ತಿಳಿಸಿದರು.



ಈ ಸಂದರ್ಭದಲ್ಲಿ ಹಿರಿಯೂರು ಆಯುರ್ವೇದ ಸರ್ಕಾರಿ ಆಸ್ಪತ್ರೆಯ ತಜ್ಞವೈದ್ಯರಾದ ಡಾ. ಟಿ.ಶಿವಕುಮಾರ್ ಹಾಗೂ ಗ್ರಾಮಸ್ಥರು ಹಾಜರಿದ್ದರು.

**ಫಾಸ್ಟ್ ನ್ಯೂಸ್**

## ಜೂನ್ 08ರಂದು ವಿಚಾರ ಸಂಕಿರಣ ಮತ್ತು ಸಂವಾದ ಕಾರ್ಯಕ್ರಮ

» **ಚಿತ್ರದುರ್ಗ**

ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್ಮೆಂಟ್, ವಿಜ್ಞಾನ ತಂತ್ರಜ್ಞಾನ ಮತ್ತು ನಾವಿನ್ಯತೆ ಕೇಂದ್ರ, ಭಾರತೀಯ ವಿಜ್ಞಾನ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಇದೇ ಜೂನ್ 08ರಂದು ಬೆಳಿಗ್ಗೆ 10ಕ್ಕೆ ಚಳ್ಳಕೆರೆ ಕುದಾಪುರ ಭಾರತೀಯ ವಿಜ್ಞಾನ ಸಂಸ್ಥೆ ಕೌಶಲ್ಯ ಅಭಿವೃದ್ಧಿ ಕೇಂದ್ರದಲ್ಲಿ "ರೈತರನ್ನು ಉದ್ಯಮಿಗಳನ್ನಾಗಿ ರೂಪಿಸುವಲ್ಲಿ ರೈತ ಉತ್ಪಾದಕ ಸಂಸ್ಥೆಗಳ ಪಾತ್ರ" ಎಂಬ ವಿಷಯದ ಕುರಿತು ಒಂದು ದಿನದ ವಿಚಾರ ಸಂಕಿರಣ ಮತ್ತು ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್ಮೆಂಟ್ ಮುಖ್ಯ ಕಾರ್ಯನಿರ್ವಾಹಕ ಪ್ರೊ.ಬಿ.ಗುರುಮೂರ್ತಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ ಭಾಗವಹಿಸುವರು. ಗೌರವ ಅತಿಥಿಗಳಾಗಿ ಭಾರತೀಯ ವಿಜ್ಞಾನ ಸಂಸ್ಥೆಯ ಯೋಜನೆ ಮತ್ತು ಮೂಲಸೌಕರ್ಯಗಳ ಮುಖ್ಯಸ್ಥ ಡಾ.ಎಸ್.ಕೆ.ಸತೀಶ್ ಭಾಗವಹಿಸುವರು. ಚಳ್ಳಕೆರೆಯ ಭಾರತೀಯ ವಿಜ್ಞಾನ ಸಂಸ್ಥೆಯ ಕೌಶಲ್ಯ ಅಭಿವೃದ್ಧಿ ಕೇಂದ್ರ ಹಾಗೂ ಟ್ಯಾಲೆಂಟ್ ಡೆವಲಪ್ಮೆಂಟ್ ಸೆಂಟರ್ ಸಂಚಾಲಕ ಪ್ರೊ.ಸುಬ್ಬಾರೆಡ್ಡಿ ಉದ್ಘಾಟನೆ ನೆರವೇರಿಸುವರು. ವಿಶೇಷ ಅತಿಥಿಗಳಾಗಿ ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್ಮೆಂಟ್ ಸೀಡ್ ವಿಭಾಗದ ಮುಖ್ಯಸ್ಥ ಡಾ.ಅಮಿತಾವ ಪರ್ಮಾಣಿಕ್ ಭಾಗವಹಿಸುವರು. ಸಂಪನ್ಮೂಲ ವ್ಯಕ್ತಿಗಳಾಗಿ ಮೈಸೂರಿನ ಕ್ರೆಡಿಟ್ ಐ ಸಂಸ್ಥೆ ಮ್ಯಾನೇಜಿಂಗ್ ಟ್ರಸ್ಟೀ ಡಾ.ಎಂ.ಪಿ.ವರ್ಷ, ಬೆಂಗಳೂರಿನ ಕಾಗ್‌ವೀರ್ ಸ್ಟುಡಿಯೋಸ್ ಸಂಸ್ಥಾಪಕ ಕೃಷ್ಣ ಮೋಹನ್ ಭಾಗವಹಿಸುವರು. ಕಾರ್ಯಕ್ರಮದಲ್ಲಿ ಚಿತ್ರದುರ್ಗ ಜಿಲ್ಲೆ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಡಿಯಲ್ಲಿ ಬರುವ ರೈತ ಉತ್ಪಾದಕ ಸಂಸ್ಥೆಗಳ ನಿರ್ದೇಶಕರು ಮತ್ತು ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಭಾಗವಹಿಸಬಹುದಾಗಿದೆ ಎಂದು ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್ಮೆಂಟ್ ಕಾರ್ಯಕ್ರಮ ವ್ಯವಸ್ಥಾಪಕ ಪ್ರತಾಪ್ ಮೂರ್ತಿ ತಿಳಿಸಿದ್ದಾರೆ.

## ಮುಂದಿನ ಪೀಳಿಗೆಗೆ ಪರಿಸರ ಉಳಿಸಿ: ನ್ಯಾ. ವಾಸುದೇವ್

» **ಮೊದಲ ಪುಟದಿಂದ**

ಪರಿಸರ ದಿನಾಚರಣೆ ಸಸಿ ನೆಡುವುದಕ್ಕೆ ಸೀಮಿತವಾಗಬಾರದು. ವಾತಾವರಣಕ್ಕೆ ಪೂರಕವಾಗಿ ಸ್ಪಂದಿಸಿ ಪರಿಸರವನ್ನು ಕಾಪಾಡುವ ಕರ್ತವ್ಯಕ್ಕೆ ಮುನ್ನುಡಿಯಾಗಬೇಕು ಎಂದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ ಮಾತನಾಡಿ, ಪರಿಸರ ನಾಶದಿಂದ ಕಳೆದ ಬೇಸಿಗೆಯ ತಾಪಮಾನದಿಂದ ಹಲವಾರು ಸಮಸ್ಯೆಗಳನ್ನು ಎದುರಿಸಿದ್ದೇವೆ. ನಮ್ಮ ದೇಶ 1988ರಲ್ಲಿ ರಾಷ್ಟ್ರೀಯ ಅರಣ್ಯ ನೀತಿಯನ್ನು ಅಳವಡಿಸಿಕೊಂಡಿದೆ. ಅದರಂತೆ ಭೂ ಭಾಗದ 3/1 ರಷ್ಟು ಅರಣ್ಯ ಹೊಂದಿರಬೇಕು. ಇಲ್ಲವಾದಲ್ಲಿ ಈ ರೀತಿಯ ಹವಮಾನ ವೈಪರೀತ್ಯಗಳನ್ನು ಅನುಭವಿಸಬೇಕಾಗುತ್ತದೆ. ಇರುವುದೊಂದೇ ಭೂಮಿ ಅದನ್ನು ಸಂರಕ್ಷಿಸಬೇಕು, ಇಲ್ಲವಾದಲ್ಲಿ ಮಾನವ ಮತ್ತು ಪ್ರಾಣಿ ಸಂಕುಲ ನಾಶವಾಗುದರಲ್ಲಿ ಸಂದೇಹವಿಲ್ಲ ಎಂದರು.ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್, 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಗಂಗಾಧರ ಚನ್ನಬಸಪ್ಪ ಹಡಪದ್ ಸೇರಿದಂತ ಇತರೆ ನ್ಯಾಯಾಧೀಶರುಗಳಾದ ಡಿ. ಮಮತ, ಎ.ಎಂ. ಚೈತ್ರಾ, ರಶ್ಮಿ.ಎಸ್.ಮುರಡಿ, ಎಸ್.ಅನಿತಾ ಕುಮಾರಿ, ಆರ್.ಸಹನಾ, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ವಲಯ ಅರಣ್ಯಾಧಿಕಾರಿ ಹೆಚ್.ಉಷಾರಾಣಿ, ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲ ಬಿ.ಟಿ.ತಿಪ್ಪೇರುದ್ರಸ್ವಾಮಿ, ಅರಣ್ಯ ಇಲಾಖೆಯ ಹಾಗೂ ಕಾಲೇಜು ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ವ್ಯಕ್ತಿಗಳು ಕಾಣೆ ಪತ್ತೆಗೆ ಮನವಿ

» **ಚಿತ್ರದುರ್ಗ**

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಇಬ್ಬರು ವ್ಯಕ್ತಿಗಳು ಕಾಣೆಯಾದ ಕುರಿತು ಎರಡು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಹಿರಿಯೂರು ತಾಲ್ಲೂಕಿನ ಲಕ್ಕೇನಹಳ್ಳಿ ಗ್ರಾಮದ ದುರ್ಗಾದಾಸ್ (ಸು.39ವರ್ಷ) ಕಾಣೆಯಾದ ಕುರಿತು 2024ರ ಜನವರಿ 14 ರಂದು ಪ್ರಕರಣ ದಾಖಲಾಗಿದೆ. ದುರ್ಗಾದಾಸ್ 5 ಅಡಿ ಎತ್ತರ, ದುಂಡು ಮುಖ ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಹಳದಿ ಬಣ್ಣದ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಹಿರಿಯೂರು ತಾಲ್ಲೂಕಿನ ಬಗ್ಗನಾಡು ಗ್ರಾಮದ ರಾಜಪ್ಪ ತಂದೆ ಕರಿಯಣ್ಣ (35ವರ್ಷ) ಕಾಣೆಯಾದ ಕುರಿತು 2024ರ ಮೇ 02ರಂದು ಪ್ರಕರಣ ದಾಖಲಾಗಿದೆ. ರಾಜಪ್ಪ 5 ಅಡಿ ಎತ್ತರ, ದುಂಡು ಮುಖ, ಗೋಧಿ ಬಣ್ಣ ದೃಢ ಮೈಕಟ್ಟು ತಲೆಯಲ್ಲಿ ಕಪ್ಪು ಕೂದಲಿದ್ದು, ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಕೆಂಪು ಟೀ ಶರ್ಟ್ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ.

## ಫಾಸ್ಟ್ ನ್ಯೂಸ್

### ಸರ್ವೋದಯ ಎಜುಕೇಷನ್ ಟ್ರಸ್ಟ್ ಆವರಣದಲ್ಲಿ ಪರಿಸರ ದಿನಾಚರಣೆ



» **ಪರಶುರಾಂಪುರ**

ಪರಿಸರವು ಕೇವಲ ಪರಿಸರ ದಿನಾಚರಣೆಗೆ ಜತೆಗೆ ಕೆಲವು ಭಾಷಣಗಳಿಗೆ ಮಾತ್ರ ಸಾಕ್ಷಿಯಾಗಿರದೆ ಈ ದಿನಕ್ಕಿರುವ ಮಹತ್ವವನ್ನು ಪ್ರತಿಯೊಬ್ಬರು ತಿಳಿಯಬೇಕಾಗಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಚೆನ್ನಕೇಶವ ತಿಳಿಸಿದರು. ಗ್ರಾಮದ ಪಾವಗಡ ರಸ್ತೆಯಲ್ಲಿ ಬರುವ ಸರ್ವೋದಯ ಎಜುಕೇಷನ್ ಟ್ರಸ್ಟ್ ಆವರಣದಲ್ಲಿ ಬುಧವಾರ ಆಯೋಜಿಸಿದ್ದ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಶಾಲೆಗಳಲ್ಲಿ ಸಣ್ಣ ತರಗತಿಗಳಿಂದಲೇ ಪಠ್ಯಗಳಲ್ಲಿ ಪರಿಸರದ ಬಗ್ಗೆ ಮಾಹಿತಿ ನೀಡುವ ಮೂಲಕ ಮಕ್ಕಳಲ್ಲಿ ಅರಿವು ಮೂಡಿಸುವ ಕೆಲಸ ಮಾಡಬೇಕು. ವಾರದಲ್ಲಿ ಒಂದು ಅವಧಿಯಾದರೂ ಪರಿಸರದ ಬಗ್ಗೆ ಮಾಹಿತಿ ನೀಡುವ ಮೂಲಕ ಚಿಕ್ಕ ವಯಸ್ಸಿನಿಂದಲೇ ಪರಿಸರದ ಬಗ್ಗೆ ಉತ್ತಮ ಅಭಿಪ್ರಾಯ ಹೊಂದಲು ಸಹಕಾರಿಯಾಗಬಹುದು ಎಂದರು. ಈ ವೇಳೆಯಲ್ಲಿ ಆವರಣದಲ್ಲಿ ವಿವಿಧ ಬಗೆಯ ಜಾತಿಯ ಹಣ್ಣು ಹೂವುಗಳ ಸಸಿಗಳನ್ನ ನೆಡುವುದರ ಮೂಲಕ ನೀರೆಯಲಾಯಿತು.ಬಳಿಕ ಪರಿಸರದ ಮಹತ್ವವನ್ನ ಶಾಲಾ ಶಿಕ್ಷಕರು ತಿಳಿಸಿಕೊಡಲಾಯಿತು. ಸಂದರ್ಭದಲ್ಲಿ ಶಾಲಾ-ಕಾಲೇಜು ಶಿಕ್ಷಕರು, ಉಪನ್ಯಾಸಕರು ಹಾಗೂ ಸಿಬ್ಬಂದಿ ಜತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ವಿಶ್ವಪರಿಸರ ದಿನಾಚರಣೆ




» **ಚಳ್ಳಕೆರೆ**

ವಿಶ್ವಪರಿಸರ ದಿನಾಚರಣೆ ಅಂಗವಾಗಿ ನಗರದ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಎನ್‌ಎಸ್‌ಎಸ್ ಘಟಕದ ವತಿಯಿಂದ ಅಂಗವಾಗಿ ಪರಸರ ಸ್ವಚ್ಚತೆ ಹಾಗೂ ಗಿಡಗಳ ಸಂರಕ್ಷಣೆಯ ಬಗ್ಗೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಾಯಿತು. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಪ್ರಾಂಶುಪಾಲ ಎಂ.ರವಿಶ್, ವಿದ್ಯಾರ್ಥಿಗಳು ಪರಿಸರ ರಕ್ಷಣೆಯ ರೂವಾರಿಗಳಾಗಬೇಕು. ತಮ್ಮ ಮನೆ, ಊರು ಹಾಗೂ ಇನ್ನಿತರೆ ಕಡೆಗಳಲ್ಲಿ ಮರಗಿಡಗಳನ್ನು ನೆಟ್ಟು ಬೆಳೆಸುವ ಕಾರ್ಯಕ್ಕೆ ಸಹಕರಿಸಬೇಕು. ಗ್ರಾಮೀಣ ಭಾಗದಲ್ಲೂ ಸಹ ವಿದ್ಯಾರ್ಥಿಗಳು ಪರಿಸರ ವಿಚಾರದಲ್ಲಿ ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಬೇಕು. ನಮ್ಮ ಸುತ್ತಮುತ್ತಲಿನ ಪರಿಸರ ಉತ್ತಮವಾಗಿದ್ದಲ್ಲಿ ಮಾತ್ರ ನಾವು ಸುಧೀರ್ಘಕಾಲ ಬದುಕಲು ಸಾಧ್ಯವೆಂದರು.
ಪ್ರಾಸ್ತಾವಿಕವಾಗಿ ಮಾತನಾಡಿದ ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಪ್ರತಿವರ್ಷವೂ ವಿಶ್ವಪರಿಸರ ದಿನಾಚರಣೆಯನ್ನು ಅತ್ಯಂತ ಉತ್ಸಾಹದಿಂದ ಆಚರಣೆ ಮಾಡಲಾಗುತ್ತದೆ. ಪ್ರಸ್ತುತ ನಮ್ಮ ಕಾಲೇಜು ಆವರಣದಲ್ಲಿ ಹಸಿರಿನ ಕ್ರಾಂತಿ ನಡೆದಿದೆ. ಕಾಲೇಜು ಆವರಣದಲ್ಲಿ ಸುಮಾರು 400ಕ್ಕೂ ಹೆಚ್ಚು ವಿವಿಧ ತಳಿಯ ಗಿಡಗಳಿದ್ದು, ಅವುಗಳನ್ನು ಎನ್‌ಎಸ್‌ಎಸ್ ವಿದ್ಯಾರ್ಥಿಗಳುಪೋಷಣೆ ಮಾಡುವ ಮೂಲಕ ಸಂರಕ್ಷಣೆ ಮಾಡಿದ್ದಾರೆ. ವಿಶ್ವಪರಿಸರ ದಿನಾಚರಣೆಯೊಂದು ಮಾತ್ರ ಈ ಕಾರ್ಯ ಮಾಡದೆ ಪ್ರತಿನಿತ್ಯವೂ ಪರಿಸರ ರಕ್ಷಣೆಯತ್ತ ಎಲ್ಲರೂ ಗಮನನೀಡಬೇಕೆಂದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ವಸಂತಕುಮಾರ್, ಪುಟ್ಟರಂಗಪ್ಪ, ಪುಷ್ಪಲತಾ, ಹಬೀಬುಲ್ಲಾ, ಹೀನಾಕೌಸರ್, ಜಾನಕಮ್ಮ, ರೇಖಾ, ರಾಜಶೇಖರ್, ಮಹಂತೇಶ್, ಚಂದ್ರಶೇಕರ್, ಅನುಷ, ಪಲ್ಲವಿ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



**ಚಳ್ಳಕೆರೆ ನಗರದ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ವಿಶ್ವಪರಿಸರ ದಿನಾಚರಣೆ ಅಂಗವಾಗಿ ಕಾರ್ಯನಿರ್ವಾಹಣಾಧಿಕಾರಿ ಬಿ.ಎಸ್.ಲಕ್ಷ್ಮಣ್ ಸಸಿ ನೆಡುವ ಮೂಲಕ ಚಾಲನೆ ನೀಡಿದರು. ಸಂಪತ್‌ಕುಮಾರ್, ಸಂತೋಷ್, ಮಹೇಂದ್ರ ಮೊದಲಾದವರು ಇದ್ದರು.**

# ಬಾಲ ಕಾರ್ಮಿಕ ಪದ್ದತಿ ಸಂಪೂರ್ಣ ನಿರ್ಮೂಲನೆಗೆ ಮತ್ತು ಪುನರ್ವಸತಿಗೆ ಕ್ರಮ ವಹಿಸಲು ಡಿಸಿ ಸೂಚನೆ

» **ದಾವಣಗೆರೆ**

ಬಾಲಕಾರ್ಮಿಕರು ಮತ್ತು ಕಿಶೋರಕಾರ್ಮಿಕನ್ನು ದುಡಿಮೆಯಿಂದ ಬಿಡುಗಡೆಗೊಳಿಸುವ ಜೊತೆಗೆ ಪುನರ್ವಸತಿ ಕಲ್ಪಿಸಲು ಒತ್ತು ನೀಡಲು ಹಾಗೂ ಸಂಘಟಿತ ಮತ್ತು ಅಸಂಘಟಿತ ವಲಯಗಳಲ್ಲಿ ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಬಾಲಕಾರ್ಮಿಕ ಪದ್ದತಿ ನಿರ್ಮೂಲನೆ ಬಗ್ಗೆ ಧ್ವನಿ ಸುರುಳಿ ಪ್ರಚಾರ ಮಾಡುವ ಮೂಲಕ ಜನರಲ್ಲಿ ತಿಳುವಳಿಕೆ ಮೂಡಿಸಬೇಕೆಂದು ಜಿಲ್ಲಾಧಿಕಾರಿ ಹಾಗೂ ಬಾಲ ಕಾರ್ಮಿಕ ಪದ್ದತಿ ನಿರ್ಮೂಲನಾ ಯೋಜನಾ ಸೊಸೈಟಿ ಅಧ್ಯಕ್ಷ ರಾದ ಡಾ.ವೆಂಕಟೇಶ್ ಎಂ.ವಿ. ತಿಳಿಸಿದರು.

ಅವರುಬುಧವಾರ(ಜೂ.5)ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಇವರುಗಳ ವತಿಯಿಂದ ಆಯೋಜಿಸಲಾದ ಕಾರ್ಯಕಾರಿ ಹಾಗೂ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬಾಲಕಾರ್ಮಿಕರು ಮತ್ತು ಕಿಶೋರಕಾರ್ಮಿಕರನ್ನು ಬಿಡುಗಡೆ ಮತ್ತು ಪುನರ್ವಸತಿಗೊಳಿಸುವ ಬಗ್ಗೆ ದೊಡ್ಡ ಉದ್ದಿಮೆಗಳು ಫ್ಯಾಕ್ಟರಿಗಳು, ಡಾಬಾ ಹೋಟೆಲ್, ಶಾ[illegible]ಗಳಲ್ಲಿನ




ಬಾಲಕಾರ್ಮಿಕರನ್ನು ಬಿಡುಗಡೆಗೊಳಿಸಿ, ಪುನರ್ವಸತಿ ಕಲ್ಪಿಸಬೇಕು.

ಇಟ್ಟಂಗಿ ಭಟ್ಟಿಗಳಲ್ಲಿ, ಮಂಡಕ್ಕಿ ಭಟ್ಟಿಗಳಲ್ಲಿ, ಕೆಲಸ ಮಾಡಲು ಬೇರೆ ಬೇರೆ ಜಿಲ್ಲೆಗಳಿಂದ ಹಾಗೂ ಹೊರ ರಾಜ್ಯದಿಂದ ಕುಟುಂಬ ಸಮೇತರಾಗಿ 150 ರಿಂದ 200 ಕಾರ್ಮಿಕರು ವಲಸೆ ಬರುತ್ತಾರೆ, ಅವರೊಂದಿಗೆ ಮಕ್ಕಳು ಬಂದಿರುತ್ತಾರೆ. ಅಂತವರಿಗೆ ಶಿಕ್ಷಣದ ಮಹತ್ವ ತಿಳಿಸುವುದು, ಮಕ್ಕಳನ್ನು ಶಾಲೆಗೆ ಬರುವಂತೆ ಪೋಷಕರ ಮನವೊಲಿಸುವ ಜಾಗೃತಿ ಹಾಗೂ ಕಾನೂನು ಅರಿವು ಮೂಡಿಸಬೇಕೆಂದರು. ಸಿ.ಆರ್.ಸಿ ಸೆಂಟರ್ ಸಂಪರ್ಕಿಸಿ ಮಕ್ಕಳಿಗೆ ಶಿಕ್ಷಣಕ್ಕೆ ಅನುಕೂಲವಾಗುವಂತಹ ಚಟುವಟಿಕೆಗಳ ಆಟಿಕೆಗಳನ್ನು ನೀಡಿ ಅರಿವು ಮೂಡಿಸುವುದು.

ಎಸ್.ಸಿ.ಪಿ-ಟಿ.ಎಸ್.ಪಿಅನುದಾನವನ್ನು ನೀಡಿರುವ ಮಾರ್ಗದರ್ಶನದಂತೆ ಗ್ರಾಮಿಣ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಭೇಟಿ ಅಲ್ಲಿನ ವಾಸ್ತವತೆಯ ಸಮಿಕ್ಷೆ ನಡೆಸಿ ಅಲ್ಲಿರುವ ಮಕ್ಕಳ ಬಗ್ಗೆ ಪರಿಶೀಲಿಸಿ ಕನಿಷ್ಠ ಹತ್ತನೆ ತರಗತಿಯ ವರೆಗೆ ಶಿಕ್ಷಣ ಪಡೆಯುವಂತೆ ಮಕ್ಕಳಲ್ಲಿ ಅರಿವು ಮೂಡಿಸುವ ಪ್ರಯತ್ನ ಮಾಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಅಧಿಕಾರಿಗಳಿಗೆ ಹಾಗೂ ಸಿಆರ್ ಪಿಗಳಿಗೆ ತಿಳಿಸಿದರು.

ಕೈಗಾರಿಕೆ ಮತ್ತು ಹೋಟೆಲ್‌ಗಳಲ್ಲಿ ಕೆಲಸಗಳಲ್ಲಿ ಹೆಚ್ಚಾಗಿ ಬಾಲಕಾರ್ಮಿಕರನ್ನು ನೇಮಿಸಿಕೊಳ್ಳಲಾಗುತ್ತಿದೆ, ಈ ಬಗ್ಗೆ ಜಿಲ್ಲಾ ಕಾರ್ಯಪಡೆಯಲ್ಲಿ ನೇಮಕಗೊಂಡಿರುವ ಎಲ್ಲಾ ಇಲಾಖೆಯ ಅಧಿಕಾರಿಗಳು ಮಾಸಿಕ ತಪಾಸಣೆಗಳಲ್ಲಿ ಭಾಗವಹಿಸಿ ಬಾಲಕಾರ್ಮಿಕರು ಕಂಡುಬಂದಲ್ಲಿ ಅವರಲ್ಲಿ ಅರಿವು ಮೂಡಿಸಿ ಮಾಲೀಕರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಹಾಗೂ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ ನಂತರ ಮಕ್ಕಳ ಕುಟುಂಬಕ್ಕೆ ಸಾಮಾಜಿಕ ಭದ್ರತೆಯಡಿ ಸರ್ಕಾರದ ಸೇವೆಗಳನ್ನು ಒದಗಿಸಲು ಸಂಬಂಧಪಟ್ಟ ಅಧಿಕಾರಿಗಳು ಸಹಕರಿಸುವಂತೆ ಸೂಚಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣ ಮಾತನಾಡಿ ಅನಿರೀಕ್ಷಿತ ದಾಳಿಯಲ್ಲಿ ಸಿಕ್ಕ ಮಕ್ಕಳನ್ನು ಹತ್ತಿರದ ಮೊರಾರ್ಜಿ ಶಾಲೆಗಳಿಗೆ ದಾಖಲಿಸುವುದು ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿ ಪಡೆದು ಪುನಃ ಶಾಲೆಗೆ ದಾಖಲಿಸಿಕೊಳ್ಳುವುದು ಮಕ್ಕಳು ಶಾಲೆಯಿಂದ ಹೊರಗೆ ಉಳಿಯದಂತೆ ಸೂಕ್ತ ಕ್ರಮ ವಹಿಸಲು ತಿಳಿಸಿದರು. ಹಾಗೂ ನವೆಂಬರ್ ತಿಂಗಳಿಂದ ಆನಗೋಡು, ಕುಕ್ಕುವಾಡ, ಹರಿಹರದಲ್ಲಿ ಕಬ್ಬು ಕಟಾವು ಮಾಡಲು ಮಹಾರಾಷ್ಟದಿಂದ ಕಾರ್ಮಿಕ ಕುಟುಂಬ ವಲಸೆ ಬರುತ್ತಾರೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ಸಭೆಯ ಗಮನಕ್ಕೆ ತಂದು ಅಂತಹ ಮಕ್ಕಳನ್ನು ಗಮನಿಸಿ ಅವರು ಶಿಕ್ಷಣದಿಂದ ವಂಚಿತರಾಗದಂತೆ ನಾವೆಲ್ಲರೂ ಶ್ರಮಿಸೋಣ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ, ಡಿಡಿಪಿಐ ಕೊಟ್ರೇಶ್, ಜಿಲ್ಲಾ ಮಕ್ಕಳ ಘಟಕದ ರಕ್ಷಣಾಧಿಕಾರಿ ಕವಿತ ಉಪಸ್ಥಿತರಿದ್ದರು.

# ಮುಂದಿನ ಪೀಳಿಗೆಗೆ ಪರಿಸರ ಉಳಿಸುವ ಅಗತ್ಯವಿದೆ: ರಾಜೇಶ್ವರಿ ಎನ್.ಹೆಗಡೆ

» **ದಾವಣಗೆರೆ**

ಮನುಷ್ಯರಾದ ನಾವು ನಮ್ಮ ಜೀವನಕ್ಕೆ ಅಗತ್ಯವಾಗಿ ಬೇಕಾದ ಅತ್ಯವಶ್ಯ ವಸ್ತುಗಳನ್ನು ಸಂಗ್ರಹಿಸಿಡುವ ರೀತಿಯಲ್ಲಿ ನಮ್ಮ ಮುಂದಿನ ಪೀಳಿಗೆಗೆ ಪರಿಸರವನ್ನು ಉಳಿಸಿಕೊಂಡು ಹೋಗುವ ಅಗತ್ಯವಿದೆ ಎಂದು ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ.ಎನ್. ಹೆಗಡೆ ಅಭಿಪ್ರಾಯಪಟ್ಟರು

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಬಾಲಭವನ ಸಮಿತಿ, ಮಾಕನೂರು ಮಲ್ಲೇಶಪ್ಪ ಶಿಕ್ಷಣ ಮಹಾವಿದ್ಯಾಲಯ ದಾವಣಗೆರೆ ಇವರ ಸಹಯೋಗದಲ್ಲಿ ನಗರದ ಹದಡಿ ರಸ್ತೆಯಲ್ಲಿರುವ ಮಾಕನೂರು ಮಲ್ಲೇಶಪ್ಪ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬುಧವಾರ ಆಯೋಜಿಸಲಾಗಿದ್ದ ವಿಶ್ವ ಪರಿಸರ ದಿನಾಚರಣೆಯನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ, ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಗಿಡ, ಮರ, ಹೂವು, ಪಕ್ಷಿ, ಪ್ರಾಣಿ, ಗಾಳಿ, ನೀರು, ಬೆಳಕು ಇವೆಲ್ಲವೂ ಪರಿಸರವಾಗಿವೆ. ಇವೆಲ್ಲವನ್ನೂ ನಾವು ಸಂರಕ್ಷಣೆ ಮಾಡಬೇಕಿದೆ. ಈ ಹಿಂದಿನ 10-15 ವರ್ಷಗಳ ಹಿಂದೆ ನಾವು ಈಗಿನಷ್ಟು ಬಿಸಿಲಿನ ತಾಪದ ಅನುಭವ ಕಂಡಿರಲಿಲ್ಲ. ಆದರೆ, ನಾವುಗಳು ಪರಿಸರ ನಾಶ ಮಾಡುತ್ತಿರುವ ಕಾರಣ ಹವಾಮಾನ ವೈಪರೀತ್ಯವಾಗಿದೆ. ಪ್ರಕೃತಿಯಲ್ಲಿ ಹಲವಾರು ಬದಲಾವಣೆ ಆಗಿವೆ ಎಂದು ಆತಂಕ ವ್ಯಕ್ತ ಪಡಿಸಿದರು.

ನಗರೀಕರಣದ ಹೆಸರಿನಲ್ಲಿ ಕಾಡು, ಮರಗಳನ್ನು ಕಡಿಯಲಾಗುತ್ತಿದೆ. ಕಾರಣ ಪರಿಸರ ರಕ್ಷಣೆ ಮಾಡುವ ಕುರಿತಂತೆ ಯುವಪೀಳಿಗೆ ಚಿಂತನೆ ನಡೆಸಬೇಕಿದೆ. ಅದರಲ್ಲೂ ಇಂದಿನ ಯುವಪೀಳಿಗೆಗೆ ಪರಿಸರದ ಬಗ್ಗೆ ತಿಳಿದೇ ಇರಲ್ಲ. ಎಲ್ಲೆಂದರಲ್ಲಿ ಮೂತ್ರ ವಿಸರ್ಜನೆ, ಪ್ಲಾಸ್ಟಿಕ್ ಬಳಕೆ, ನಮ್ಮ ಕರ್ತವ್ಯ ಅರಿತುಕೊಂಡರೆ ನಾವು



ಪರಿಸರ ಸಂರಕ್ಷಣೆ ಮಾಡಬಹುದು. ಅದರಂತೆ ವಾಯುಮಾಲಿನ್ಯ ಕೂಡ ಪರಿಸರ ನಾಶಕ್ಕೆ ಕಾರಣವಾಗಿದೆ. ಶಬ್ದ ಮಾಲೀನ್ಯ ಕೂಡ ಪರಿಸರ ನಾಶಕ್ಕೆ ಕಾರಣ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿದ್ದ ಹಿರಿಯ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ ಮಾತನಾಡಿ, ಆಧುನಿಕತೆ ಹೆಚ್ಚಿದಂತೆ ಜನರಲ್ಲಿ ಪರಿಸರ ಕಾಳಜಿ ಕಡಿಮೆಯಾಗುತ್ತಿದೆ. ಮಾನವರಾದ ನಮಗೆ ಪರಿಸರ ಇಲ್ಲ ಎಂದರೆ ನಮಗೆ ಜೀವನವೇ ಇಲ್ಲದಂತಾಗುತ್ತದೆ. ಆಧುನಿಕತೆಯ ಹೆಸರಿನಲ್ಲಿ ತಂತ್ರಜ್ಞಾನದ ಪ್ರತಿಯಲ್ಲಿ ನಾವುಗಳು ಪರಿಸರಕ್ಕೆ ವಿಷ ನೀಡುತ್ತಿದ್ದೇವೆ. ಈ ಬಗ್ಗೆ ಈಗಲೇ ಎಚ್ಚೆತ್ತುಕೊಳ್ಳಬೇಕೆಂದು ಸಲಹೆ ನೀಡಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್.ಅರುಣಕುಮಾರ್ ಮಾತನಾಡಿ, ಇಂದು ಎಲ್ಲಾ ಕ್ಷೇತ್ರಗಳಲ್ಲಿ ವಿಕಾಸದ ಹೆಸರಿನಲ್ಲಿ ವಿನಾಶದ ಕಡೆಗೆ ಹೋಗುತ್ತಿದ್ದೇವೆ. ಪರಿಸರ ಸಂರಕ್ಷಣೆಯಿಂದ ನಾವೆಲ್ಲ ಬದುಕಲು ಸಾಧ್ಯ. ಜೀವಿಗಳ ಪೋಷಣೆಯಲ್ಲಿ ಪರಿಸರ ಪ್ರಮುಖ ಪಾತ್ರವಹಿಸುತ್ತದೆ. ಪರಿಸರ ಸಮೃದ್ಧಿ, ಆರೋಗ್ಯಕರ ಜೀವನ ಭೂಮಿಯ ಮೇಲಿನ ಪ್ರತಿಯೊಂದು ಜೀವಿಯ ಅಸ್ತಿತ್ವಕ್ಕೆ ಅವಶ್ಯಕವಾಗಿದೆ ಎಂದು ಹೇಳಿದರು.

ಎಂ.ಎಂ.ಶಿಕ್ಷಣ ಮಹಾವಿದ್ಯಾಲಯದ ಕಾಲೇಜಿನ ಸಲಹಾ ಸಮಿತಿ ಉಪಾಧ್ಯಕ್ಷ ಪ್ರೊ. ಹಾಲಪ್ಪ ಅಧ್ಯಕ್ಷತೆ ವಹಿಸಿದ್ದರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಜಿ.ಕೊಟ್ರೇಶ್, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಗೌರವಾಧ್ಯಕ್ಷ ಡಾ.ಜೆ.ಬಿ.ರಾಜ್, ಎಂ.ಎಂ.ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಕೆ.ಟಿ.ನಾಗರಾಜನಾಯ್ಕ ಇತರರು ಇದ್ದರು.

### ಪರಿಸರ ಸಮತೋಲನಕ್ಕಾಗಿ ಕಚೇರಿ ಆವರಣ, ಸರ್ಕಾರಿ ಜಾಗದಲ್ಲಿ ಸಸಿ ಬೆಳೆಸಲಾಗುತ್ತದೆ: ಜಿಲ್ಲಾಧಿಕಾರಿ



» **ದಾವಣಗೆರೆ**

ಪರಿಸರ ಸಮತೋಲನಕ್ಕಾಗಿ ಜಿಲ್ಲಾಡಳಿತ ಭವನ ಸೇರಿದಂತೆ ಕಚೇರಿಗಳ ಆವರಣದಲ್ಲಿ ಗಿಡ, ಮೂರು ಬೆಳೆಸಲು ಈ ವರ್ಷ ಸಸಿ ಹಾಕಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಜೂನ್ 5 ರಂದು ಜಿಲ್ಲಾಡಳಿತ ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿ, ಅರಣ್ಯ ಇಲಾಖೆ ವತಿಯಿಂದ ಜಿಲ್ಲಾಡಳಿತ ಭವನದ ಆವರಣದಲ್ಲಿ ಸಸಿ ನೆಡುವ ಮೂಲಕ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು. ಈ ವೇಳೆ ಮಾತನಾಡಿದ ಅವರು ಇಲಾಖೆಗಳ ಅವರಣ ಮತ್ತು ನೀರು ಪೂರೈಕೆ ಮಾಡುವ ಟ್ಯಾಂಕ್ ಗಳ ಸುತ್ತಮುತ್ತ ಹಾಗೂ ಖಾಲಿ ಇರುವ ಸರ್ಕಾರಿ ಜಾಗಗಳಲ್ಲಿ ಸಸಿ ನೆಡುವ ಮೂಲಕ ಪರಿಸರ ಸಮತೋಲನ ಕಾಯ್ದುಕೊಳ್ಳಲು ಯೋಜಿಸಲಾಗಿದೆ. ಜಿಲ್ಲೆಯ ರೈತ ಸಂಘಟನೆಗಳು ಸಹ ಪರಿಸರ ಸಂರಕ್ಷಣೆಗೆ ಗಿಡ, ಮರಬೆಳೆಸಲು ಮುಂದೆ ಬಂದಿದ್ದಾರೆ ಎಂದರು. ಜಿಲ್ಲಾ ಪಂಚಾಯತ್ ಮುಖ್ಯಕಾರ್ಯ ನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಎಸ್.ಪಿ. ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನಾ ಭಾನು ಎಸ್.ಬಳ್ಳಾರಿ, ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ ಹಾಗೂ ಇನ್ನಿತರರು ಭಾಗವಹಿಸಿದ್ದರು.

### ವಿದ್ಯುತ್ ವ್ಯತ್ಯಯ

ದಾವಣಗೆರೆ: ಎಸ್.ಆರ್.ಎಸ್ ಕೇಂದ್ರ ದಿಂದ ಹೊರಡುವ ಶಾಮನೂರು ವಿದ್ಯುತ್ ಮಾರ್ಗಗಳಲ್ಲಿ ತುರ್ತು ಕಾಮಗಾರಿ ಇರುವುದರಿಂದ ಮೇ.7 ರಂದು ಬೆಳಿಗ್ಗೆ 10 ರಿಂದ 6 ಗಂಟೆಯವರೆಗೆ ಶಾಮನೂರು, ಜರಿಕಟ್ಟೆ, ಮುದಹದಡಿ, ಜೆ.ಹೆಚ್ ಪಟೇಲ್ ಬಡಾವಣೆ, ಕೆ.ಹೆಚ್.ಬಿ. ಹೊಸಕುಂದವಾಡ, ಹಳೆಕುಂದವಾಡ, ರಶ್ಮಿ ಹಾಸ್ಟೇಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

## ಪ್ರಮುಖ ಸುದ್ದಿ

# ಜೀವವೈವಿಧ್ಯದ ಉಳಿವಿಗೆ ಸೃಷ್ಟಿಯಾದ ನಿಸರ್ಗ ಉಳಿಸಿ

» **ಚಿತ್ರದುರ್ಗ**

ಪ್ರತಿ ಜೀವಿ ಬದುಕಲು ಅವಲಂಬಿತವಾಗಿರುವುದು ಈ ಪ್ರಕೃತಿ, ಜೀವವೈವಿಧ್ಯದ ಉಳಿವಿಗೆ ಸೃಷ್ಟಿಯಾದ ಪವಿತ್ರ ನಿಸರ್ಗವನ್ನು ಉಳಿಸಿ, ಬೆಳೆಸುವ ದೃಢ ಸಂಕಲ್ಪದೊಂದಿಗೆ ಮುಂದಿನ ಪೀಳಿಗೆಗೂ ಪರಿಸರ ಸಂರಕ್ಷಣೆಯ ಜಾಗೃತಿ ಮೂಡಿಸುವ ಉದ್ದೇಶದಿಂದ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಚಿತ್ರದುರ್ಗ ಜಿಲ್ಲಾ ಶಾಖೆ ಹಾಗೂ ಪ್ರಕೃತಿ ಆಂಗ್ಲ ಹಿರಿಯ ಪ್ರಾಥಮಿಕ ಶಾಲೆ, ಚಿತ್ರದುರ್ಗ ಮತ್ತು ಶ್ರೀ ಪದ್ಮಾವತಿ ಕಾಲೇಜ್ ಆಫ್ ನರ್ಸಿಂಗ್, ಚಿತ್ರದುರ್ಗ ಇವರುಗಳ ಸಂಯುಕ್ತಾಶ್ರಯದಲ್ಲಿ "ವಿಶ್ವ ಪರಿಸರ ದಿನಾಚರಣೆ"ಯನ್ನು ವಿನೂತನ ರೀತಿಯಲ್ಲಿ ಏರ್ಪಡಿಸಲಾಗಿತ್ತು.

ನಗರದ ಬಿ.ಎಲ್.ಗೌಡ ಲೇಔಟ್‌ನಲ್ಲಿರುವ ಪ್ರಕೃತಿ ಶಾಲೆಯ ಪಕ್ಕದಲ್ಲಿರುವ ಉದ್ಯಾನವನದಲ್ಲಿ, ಸುಮಾರು 30 ಹಣ್ಣಿನ ಗಿಡಗಳನ್ನು ನೆಡುವ ಮೂಲಕ ಈ ಕಾರ್ಯಕ್ರಮವನ್ನು ಅರ್ಥಪೂರ್ಣಗೊಳಿಸಲಾಯಿತು. ಅಷ್ಟೇ ಅಲ್ಲದೆ ಪ್ರಕೃತಿ ಶಾಲೆಯ ವಿದ್ಯಾರ್ಥಿಗಳು ಹಾಗೂ ಶ್ರೀ ಪದ್ಮಾವತಿ ಕಾಲೇಜ್ ಆಫ್ ನರ್ಸಿಂಗ್ ವಿದ್ಯಾರ್ಥಿಗಳು, ಹಾಗೂ



ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಪದಾಧಿಕಾರಿಗಳೊಂದಿಗೆ ಸುಮಾರು 300ಕ್ಕೂ ಹೆಚ್ಚು ಜನರೊಂದಿಗೆ ಪರಿಸರ ಜಾಗೃತಿ ಜಾಥಾ ಕಾರ್ಯಮವನ್ನು ನೆರವೇರಿಸಲಾಯಿತು.

ಕಾರ್ಯಕ್ರಮಕ್ಕೆ ಆಗಮಿಸಿದ್ದ ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಎಂ.ಕೆ. ತಾಜ್‌ಪೀರ್‌ರವರು ಮಾತನಾಡಿ, ಪರಿಸರ ದಿನಾಚರಣೆಯಂದು ಕೇವಲ ಗಿಡ ನೆಡುವುದಷ್ಟೇ ಅಲ್ಲ, ಅದರ ಪೋಷಣೆಯನ್ನು ಜೀವಿತಕಾಲ ಮಾಡಿದ್ದಲ್ಲಿ ಮಾತ್ರ ನಿಜವಾದ ಆಚರಣೆಯಾಗುತ್ತದೆ, ಹಾಗೆ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವ ಜವಾಬ್ದಾರಿ ಸಾರ್ವಜನಿಕರಾಗಿರುತ್ತದೆ, ಮಕ್ಕಳು, ಯುವಕರು ಈ ಕಾರ್ಯಗಳಿಗೆ ಮುಂದಾಗಬೇಕು ಎನ್ನುವ ತಮ್ಮ ಅನುಭವದ ಮಾತುಗಳನ್ನು ಆಡಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ರೊ॥ ಪಿ.ಹೆಚ್.ಎಫ್. ಎಂ.ಕೆ. ರವೀಂದ್ರರವರು ನೆರವೇರಿಸಿದರು, ನಗರಸಭಾ ಸದಸ್ಯರಾದ ಶ್ರೀಮತಿ ಸುನಿತಾ ರಘುರವರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಚಿತ್ರದುರ್ಗ ರೆಡ್‌ಕ್ರಾಸ್ ಸಂಸ್ಥೆಯಿಂದ ರಾಜ್ಯ ಸಮಿತಿ ಸದಸ್ಯರಾದ ಕೆ. ಮಧುಪ್ರಸಾದ್, ಸಭಾಪತಿಗಳಾದ ಶ್ರೀಮತಿ ಗಾಯತ್ರಿ ಶಿವರಾಮ್, ಉಪಸಭಾಪತಿಗಳಾದ ಅರುಣ್ ಕುಮಾರ್, ಕಾರ್ಯದರ್ಶಿಗಳಾದ ಮಜಹರ್‌ಉಲ್ಲಾ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರುಗಳು ಸಹ ಭಾಗವಹಿಸಿದ್ದರು.

ಶ್ರೀ ಪದ್ಮಾವತಿ ಕಾಲೇಜ್ ಆಫ್ ನರ್ಸಿಂಗ್‌ನ ಪ್ರಾಂಶುಪಾಲರಾದ ವೆಂಕಟೇಶ್‌ರೆಡ್ಡಿಯವರುಹಾಗೂಸುಮಾರು 200 ಕ್ಕೂ ಹೆಚ್ಚು ವಿದ್ಯಾರ್ಥಿಗಳೊಂದಿಗೆ ಈ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಿದರು. ಪ್ರಕೃತಿ ಶಾಲೆಯ ಆಡಳಿತ ಮಂಡಳಿಯ ಉಪಾಧ್ಯಕ್ಷರಾದ ಉಮೇಶ್ ವಿ. ತುಪ್ಪದ, ಖಜಾಂಚಿಗಳಾದ ಶ್ರೀಮತಿ ಶ್ವೇತಾ ಕಾರ್ತಿಕ್, ರೆಡ್ ಕ್ರಾಸ್ ಸಂಸ್ಥೆಯ ಸದಸ್ಯರಾದ ಗುರುಮೂರ್ತಿ, ವೀಣಾ ಜಯರಾಮ್, ಮಂಜುನಾಥ್ ಭಾಗವತ್ ಹಾಗೂ ಶಿಕ್ಷಕ ವೃಂದ, ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ, ತಮ್ಮ ಶಾಲೆಯ ಶಾಲಾ ಆಟದ ಮೈದಾನದಲ್ಲಿ 15ಕ್ಕೂ ಹೆಚ್ಚು ಹಣ್ಣಿನ ಗಿಡಗಳನ್ನು ನೆಡುವುದರ ಮೂಲಕ ಕಾರ್ಯಕ್ರಮಕ್ಕೆ ಮೆರಗನ್ನು ಕೊಟ್ಟರು. ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಚಿತ್ರದುರ್ಗ ಶಾಖೆಯ ಪರಿಸರ ವಿಭಾಗದ ಸಂಚಾಲಕರು ಹಾಗೂ ಪ್ರಕೃತಿ ಶಾಲೆಯ ಕಾರ್ಯದರ್ಶಿ ಎಂ. ಕಾರ್ತಿಕ್‌ರವರು ಕಾರ್ಯಕ್ರಮದ ನಿರೂಪಿಸಿದರು.

ಕಾರ್ಯಕ್ರಮದ ನಂತರ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಚಿತ್ರದುರ್ಗ ಜಿಲ್ಲಾ ಶಾಖೆಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಿಗೆ ಗುಲಾಬಿ ಗಿಡ ನೀಡಿ ಶುಭ ಕೋರಲಾಯಿತು.

## ಫಾಸ್ಟ್ ನ್ಯೂಸ್

### ಶ್ರೀಕೃಷ್ಣರಾಜೇಂದ್ರ ಗ್ರಂಥಾಲಯ ಆವರಣದಲ್ಲಿ ವಿಶ್ವಪರಿಸರ ದಿನಾಚರಣೆ



» **ಚಳ್ಳಕೆರೆ**

ಹಸಿರೇ ದೇಶದ ಉಸಿರು ಎಂಬುವಂತೆ ಪ್ರತಿವರ್ಷವೂ ವಿಶ್ವಪರಿಸರ ದಿನಾಚರಣೆ ಅಂಗವಾಗಿ ಗಿಡಗಳನ್ನು ನೆಟ್ಟು ಪೋಷಿಸುವ ಕಾರ್ಯವನ್ನು ಮಾಡುತ್ತೇವೆ. ಆದರೆ, ಕೇವಲ ಒಂದೇ ದಿನಕ್ಕೆ ಮಾತ್ರ ಇದುಸೀಮಿತವಾಗದೆ ನಿರಂತರವಾಗಿ ನಮ್ಮ ಸುತ್ತಮುತ್ತಲ ವಾತಾವರಣದಲ್ಲಿ ಹೆಚ್ಚು, ಹೆಚ್ಚು ಮರಗಿಡ ಬೆಳೆಸುವ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕೆಂದು ಪರಿಸರ ಪ್ರೇಮಿ, ಮಾಜಿ ಪುರಸಭೆ ಅಧ್ಯಕ್ಷ ಕೆ.ಜೆ.ಅಶೋಕ್‌ಕುಮಾರ್ ತಿಳಿಸಿದರು. ಅವರು, ಬುಧವಾರ ನಗರದ ಶ್ರೀಕೃಷ್ಣರಾಜೇಂದ್ರ ಗ್ರಂಥಾಲಯ ಆವರಣದಲ್ಲಿ ಸಸಿ ನಡೆವ ಮೂಲಕ ವಿಶ್ವಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಇಂದು ನಗರ ಮಟ್ಟದಲ್ಲಿ ಹವಾಮಾನ ಕಲುಷಿತಗೊಳ್ಳುತ್ತಿದೆ, ಹೆಚ್ಚು, ಹೆಚ್ಚು ಗಿಡ ನೆಟ್ಟು ಪೋಷಿಸುವುದರಿಂದ ನೈಸರ್ಗಿಕ ಸಂಪತ್ತಿನ ಜೊತೆಗೆ ಉಸಿರಾಡಲು ಅವಶ್ಯವಿರುವ ಆಮ್ಲಜನಕವನ್ನು ಸಹ ನಾವು ಪಡೆಯಬಹುದಾಗಿದೆ. ಪರಿಸರ ಜಾಗೃತಿ ಎಲ್ಲರ ಹೊಣೆಯಾಗಬೇಕು ಎಂದರು.

ಗ್ರಂಥಾಲಯಾಧಿಕಾರಿ ಡಿ.ತಿಮ್ಮರಾಯ, ವೀರಭದ್ರಪ್ಪ, ರೂಪ, ಅಭಿಷೇಕ್, ಕಾಂಚನಾ, ಅವಿನಾಶ್, ಸಹನ, ಪ್ರಿಯಾಂಕ, ಸಿ.ವೈ. ಗಂಗಾಧರ, ಸಿ.ಟಿ.ಶ್ರೀನಿವಾಸ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಮಳೆ ಅವಾಂತರ: ಮೂರಕ್ಕೂ ಹೆಚ್ಚು ಮನೆ ನೆಲಕ್ಕುರುಳಿ ಲಕ್ಷಾಂತರ ರೂಪಾಯಿ ನಷ್ಟ





» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ರೋಹಿಣಿ ಮಳೆ ನಿರಂತರವಾಗಿ ಮುಂದುವರೆದಿದ್ದು, ಮಳೆಯಿಂದ ಗುಡುಗು, ಸಿಡಿಲ ಜೊತೆಗೆ ಮನೆ, ಬೆಳೆ ಹಾನಿಯಾದ ಘಟನೆಗಳು ನಡೆದಿವೆ. ತಾಲ್ಲೂಕಿನಾದ್ಯಂತ ಮಂಗಳವಾರ ರಾತ್ರಿ ಒಟ್ಟು 43.08 ಎಂ.ಎಂ ಮಳೆಯಾಗಿದ್ದು, ಇಲ್ಲಿನ ತನಕ ಸುಮಾರು 800 ಎಂ.ಎಂ ಮಳೆ ದಾಖಲಾಗಿದೆ. ಚಳ್ಳಕೆರೆ–20.00, ತಳಕು–18.04, ನಾಯಕನಹಟ್ಟಿ–1.02, ದೇವರಮರಿಕುಂಟೆ–4.02 ಮಳೆದಾಖಲಾಗಿದೆ. ಇದೇ ಸಂದರ್ಭದಲ್ಲಿ ತಾಲ್ಲೂಕಿನ ದೊಡ್ಡ ಉಳ್ಳಾರ್ತಿ ಗ್ರಾಮದ ದೇವಮ್ಮ ಮತ್ತು ನಿಂಗಮ್ಮ ಎಂಬುವವರ ಮನೆಗಳು ಮಳೆಯಿಂದ ಕುಸಿದು ಬಿದ್ದು ಒಂದು ಲಕ್ಷಕ್ಕೂ ಹೆಚ್ಚು ನಷ್ಟ ಸಂಭವಿಸಿದೆ. ಸಿರಿವಾಳ ಓಬಳಾಪುರದ ಜಾಫರ್‌ಸಾಭ್ ಎಂಬುವವರ ಮನೆ ಬಿದ್ದು ಸುಮಾರು 50 ಸಾವಿರ ನಷ್ಟ ಸಂಭವಿಸಿದೆ.

ತಾಲ್ಲೂಕಿನ ಚಳ್ಳಕೆರೆ–ನನ್ನಿವಾಳ ಸಂಪರ್ಕ ಕಲ್ಪಿಸುವ ಗೊರ್ಲಕಟ್ಟೆ ಬಳಿ ಮಳೆಯಿಂದ ನದಿಯಂತೆ ಹಳ್ಳದ ನೀರು ರಭಸದಿಂದ ಹರಿದ ಪರಿಣಾಮ ಕೆಲಹೊತ್ತು ವಾಹನ ಸಂಚಾರ, ಜನರು ನೀರಿನ ರಭಸವನ್ನು ನೋಡಿ ಸುರಕ್ಷತೆ ದೃಷ್ಠಿಯಿಂದ ರಸ್ತೆಯಲ್ಲೇ ನಿಂತು ಹರಿಯುವ ನೀರನ್ನು ನೋಡಿದರು. ನಗರದ ಚಿತ್ರದುರ್ಗ ರಸ್ತೆಯ ಬಿಇಒ ಕಚೇರಿ ಎದುರಿನಲ್ಲಿ ಬಿಎಂಜಿಎಚ್‌ಎಸ್ ಹಾಗೂ ಎಚ್‌ಟಿಟಿ ಶಾಲೆಯ ಮೂಲಕ ಹರಿದ ನೀರು ನದಿಯೋಪಾದಿಯಲ್ಲಿ ರಸ್ತೆಯಲ್ಲೇ ನಿಂತು ಸಣ್ಣವ್ಯಾಪಾರಿಗಳಿಗೆ ಸಮಸ್ಯೆ ಉಂಟಾಯಿತು. ಇಲ್ಲಿದ್ದ ಹಣ್ಣಿನ ಅಂಗಡಿ ತುಂಬ ನೀರು ನಿಂತಿತ್ತು. ನಿಂತ ನೀರಿನಲ್ಲೇ ವ್ಯಾಪಾರ ಮಾಡುವ ಸ್ಥಿತಿ ನಿರ್ಮಾಣವಾಗಿತ್ತು.

## ಅರಣ್ಯ ಸಂಪತ್ತು ನಾಶವಾದರೆ ಜೀವಕ್ಕೆ ಆಪತ್ತು : ನ್ಯಾಯಾಧೀಶ ಶಮೀರ್‌ಪೀರ್‌ಸಾಬ್‌ನಂದ್ಯಾಲ

# ಉತ್ತಮ ಪರಿಸರದಿಂದ ಬದುಕಲು ಸಾಧ್ಯ

» **ಚಳ್ಳಕೆರೆ**

ವಿಶ್ವಪರಿಸರ ದಿನಾಚರಣೆ ಅಂಗವಾಗಿ ನ್ಯಾಯಾಲಯದ ಸಂಕೀರಣದಲ್ಲಿ ಅರಣ್ಯ ಇಲಾಖೆ, ನ್ಯಾಯಾಂಗ ಇಲಾಖೆ, ನಗರಸಭೆ, ತಾಲ್ಲೂಕು ವಕೀಲರ ಸಂಘದ ಸಹಯೋಗದಲ್ಲಿ ಗಿಡ ನಡೆಸುವ ಮೂಲಕ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ನೂತನ ಸಿವಿಲ್ ಹಿರಿಯ ನ್ಯಾಯಾಧೀಶ ಶಮೀರ್‌ಪೀರ್‌ಸಾಬ್‌ನಂದ್ಯಾಲ ಗಿಡನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ನಮ್ಮ ಸುತ್ತಮುತ್ತಲಿನ ಪರಿಸರವನ್ನು ನಾವೆಲ್ಲರೂ ರಕ್ಷಣೆ ಮಾಡಿದಲ್ಲಿ ಮಾತ್ರ ನಮ್ಮೆಲ್ಲರ ಆರೋಗ್ಯ ರಕ್ಷಣೆಯಾಗುತ್ತದೆ. ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಆರೋಗ್ಯದ ಬಗ್ಗೆ ಹೆಚ್ಚು ಗಮನ ನೀಡಬೇಕಾಗುತ್ತದೆ.

ನಮ್ಮೆಲ್ಲಾ ಕ್ರಿಯಾಶೀಲ ಚಟುವಟಿಕೆಗಳು ನಮ್ಮ ಆರೋಗ್ಯ ಮೇಲೆ ಅವಲಂಬಿತವಾಗಿವೆ.

ಇತ್ತೀಚಿನ ದಿನಗಳಲ್ಲಿ ಪರಿಸರವನ್ನು ನಾಶಗೊಳಿಸುವ ಕಾರ್ಯ ನಿರಂತರ ನಡೆಯುತ್ತಿದೆ, ಸಾರ್ವಜನಿಕ, ಅರಣ್ಯ ಇಲಾಖೆ ಕಣ್ಣು ತಪ್ಪಿಸಿ ಕೆಲವೊಂದು ಶಕ್ತಿಗಳು ಪರಿಸರವನ್ನು ಲೂಟಿಮಾಡುವ ಕೆಲಸವನ್ನು ಮಾಡುತ್ತಿವೆ. ಪರಿಸರ ನಶಿಸಿಹೋದರೆ ನಾವ್ಯರೂ ಜೀವಿಸಲು ಸಾಧ್ಯವಿಲ್ಲ ಎಂದರು.



ನೂತನ ಜೆಎಂಎಫ್‌ಸಿ ನ್ಯಾಯಾಧೀಶೆ ಕೆ.ಎಂ.ತೇಜಸ್ವಿನಿ ಮಾತನಾಡಿ, ಜೀವನದ ಪ್ರತಿಯೊಂದು ಕ್ಷಣವೂ ನಾವು ಉಸಿರಾಟದಿಂದಲೇ ಬದುಕುತ್ತಿದ್ದೇವೆ. ನಾವೆಲ್ಲರೂ ಉಸಿರಾಡುತ್ತೇವೆ ಎಂದರೆ ಅದಕ್ಕೆ ನಮ್ಮ ಪರಿಸರ ಮುಖ್ಯಕಾರಣ. ಹೆಚ್ಚು, ಹೆಚ್ಚು ಮರಗಿಡಗಳು ಬೆಳೆದಲ್ಲಿ ಶುದ್ಧವಾದ ಗಾಳಿ, ಬೆಳಕು ದೊರೆತಲ್ಲಿ ನಮಗೆ ಹೆಚ್ಚು ಶಕ್ತಿಬಂತಾಗುತ್ತದೆ. ಪರಿಸರದಿಂದ ನಮಗೆ ನೈಸರ್ಗಿಕವಾಗಿ ದೊರೆಯುವ ಆಮ್ಲಜನಕದಿಂದ ನಾವು ಜೀವವನ್ನು ರಕ್ಷಿಸಿಕೊಂಡಿದ್ದೇವೆ. ಯಾರು ಪರಿಸರವನ್ನು ಪ್ರೀತಿ, ಗೌರವಿಸುತ್ತಾರೋ ಅವರು ಉತ್ತಮ ಬದುಕನ್ನು ನಿರ್ವಹಿಸಲು ಸಾಧ್ಯವಾಗುತ್ತದೆ ಎಂದರು.

ಅಪರಸಿವಿಲ್ ನ್ಯಾಯಾಧೀಶೆ ಎಚ್. ಆರ್.ಹೇಮಾ, ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ಅರಣ್ಯ ಇಲಾಖೆ ಅಧಿಕಾರಿಗಳಾಧ ಬಹುಗುಣ, ನಿತಿನ್, ರಾಜೇಶ್, ಪೌರಾಯುಕ್ತ ಕೆ.ಜೀವನ್‌ಕಟ್ಟಿಮನಿ, ವಕೀಲರ ಸಂಘದ ಉಪಾಧ್ಯಕ್ಷ ಬಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಎಂ.ಸಿದ್ದರಾಜು, ಸಹಕಾರ್ಯದರ್ಶಿ ಎ.ರಾಮಕೃಷ್ಣ, ಖಜಾಂಚಿ ಟಿ.ರುದ್ರಯ್ಯ, ಎನ್.ಬೀರಪ್ಪ, ಆರ್.ಪಿ.ತಿಪ್ಪೇಸ್ವಾಮಿ, ಹನುಮಂತರಾಯ, ಬೋರಯ್ಯ, ದೊರೆನಾಗರಾಜು, ಸಣ್ಣಬೋರನಾಯಕ, ಮಧುಮತಿ, ಬಿ.ಟಿ.ಶ್ಯಾಮಲ, ಎಂ.ಎಸ್. ಜಗದೀಶ್‌ನಾಯಕ ಮುಂತಾದವರು ಉಪಸ್ಥಿತರಿದ್ದರು.



ನಿನ್ನೆ ನಡೆದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣಾ ಎಣಿಕೆಯಲ್ಲಿ ಗೆಲುವನ್ನು ಸಾಧಿಸಿದ ಗೋವಿಂದ ಕಾರಜೋಳ ರವರು ಇಂದು ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಯಡಿಯೂರಪ್ಪ ಅವರನ್ನು ಪಕ್ಷದ ಕಚೇರಿಯಲ್ಲಿ ಭೇಟಿಯಾಗಿ ಲೋಕಸಭಾ ಚುನಾವಣೆಯಲ್ಲಿ ನನಗೆ ನೀಡಿದ ಸಹಕಾರ ಮತ್ತು ಬೆಂಬಲಕ್ಕೆ ಧನ್ಯವಾದ ತಿಳಿಸಿ ಸಿಹಿಯನ್ನು ನೀಡಿದರು. ಈ ಸಂದರ್ಭದಲ್ಲಿ ವಿದಾನ ಪರಿಷತ್ ಸದಸ್ಯರಾದ ರವಿಕುಮಾರ್ ಉಪಸ್ಥಿತರಿದ್ದರು.

## ಪರಶುರಾಂಪುರ-ಗೋವಿಂದ ಎಂ ಕಾರಜೋಳ ಗೆಲುವಿಗೆ ಸಂಭ್ರಮಾಚರಣೆ

» **ಪರಶುರಾಂಪುರ**

ಗ್ರಾಮದ ಮುಖ್ಯ ವೃತ್ತದಲ್ಲಿ ಮಂಗಳವಾರ ಬಿಜೆಪಿ ಪಕ್ಷದ ಅಭ್ಯರ್ಥಿ ಗೋವಿಂದ ಎಂ ಕಾರಜೋಳ ಗೆಲುವು ಸಾಧಿಸುತ್ತಿದ್ದಂತೆ ಕಾರ್ಯಕರ್ತರು ಹಾಗೂ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚುವುದರ ಮೂಲಕ ಸಂಭ್ರಮಿಸಿದರು.

ಸಂಭ್ರಮಾಚರಣೆಯಲ್ಲಿ ಭಾಗವಹಿಸಿದ್ದ ಚಳ್ಳಕೆರೆ ಮಂಡಲ ಅಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ ಮಾತನಾಡಿ, ಲೋಕಸಭಾ ಚುನಾವಣೆಯಲ್ಲಿ ಗೋವಿಂದ ಕಾರಜೋಳ ಅಣ್ಣನವರು ಗೆಲುವು ಸಾಧಿಸಿದ್ದು, ನರೇಂದ್ರ ಮೋದಿ ಅವರ ನಾಯಕತ್ವ ಮತ್ತು ಆಡಳಿತವನ್ನ ದೇಶದ ಜನತೆ ಒಪ್ಪಿಕೊಂಡಿದ್ದಾರೆ ಎಂಬುದು ಈ ಫಲಿತಾಂಶದಿಂದ ತಿಳಿದು ಬಂದಿದೆ ಎಂದು



ತಿಳಿಸಿದರು.ಈ ವೇಳೆಯಲ್ಲಿ ಮಂಡಲ ಪ್ರಧಾನ ಕಾರ್ಯದರ್ಶಿ ಬಸವರಾಜ, ಎಸ್ಟಿ ಮೋರ್ಚಾ ತಾಲೂಕಾಧ್ಯಕ್ಷ ತಿಪ್ಪೇಸ್ವಾಮಿ, ಉಪಾಧ್ಯಕ್ಷ ಏಜೆಂಟ್ ನಾಗರಾಜ,ಟೈಲರ್ ಬಸವರಾಜ, ಹೂ ಕುಮಾರ್, ಮಿಲ್ಟ್ರಿ ಸಿದ್ದೇಶ್,ಮೋಹನ್,ವೆಂಕಟರಮಣ, ನರೇಂದ್ರ ಬಾಬು ,ಕಂಠಪ್ಪ, ಶಿವಮೂರ್ತಿ, ಗಿರೀಶ್, ತಿಪ್ಪೇಸ್ವಾಮಿ,ಶಿವು,ನಿಂಗಪ್ಪ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು

## ಜಾಗತಿಕ ತಾಪಮಾನ ತಡೆಗಟ್ಟಲು, ಪರಿಸರ ಸಂರಕ್ಷಿಸೋಣ



» **ಚಿತ್ರದುರ್ಗ**

ಜಾಗತಿಕ ತಾಪಮಾನದಿಂದ ಮನುಷ್ಯ ಕುಲ, ಪ್ರಾಣಿಸಂಕುಲ, ಜೀವ ಜಾನುವಾರುಗಳು, ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿದ್ದು, ಇದರಿಂದ ರಕ್ಷಿಸಿಕೊಳ್ಳಲು ಪರಿಸರ ಸಂರಕ್ಷಿಸುವ ಹೊಣೆಗಾರಿಕೆ ನಮ್ಮೆಲ್ಲರದಾಗಿದೆ ಎಂದು ಭಾರತ ಸೇವಾದಳದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರೇನಹಳ್ಳಿ ಅರುಣ್‌ಕುಮಾರ್ ಹೇಳಿದರು.

ಸಿದ್ಧವ್ವನದುರ್ಗದಲ್ಲಿ ಭಾರತ್ ಸೇವಾದಳ, ಗ್ರಾಮಪಂಚಾಯಿತಿ ಮತ್ತು ಗ್ರಾಮಸ್ಥರ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಸಸಿ ನೆಟ್ಟು ಮಾತನಾಡಿದರು. ಜಾಗತಿಕ ತಾಪಮಾನ ಈ ವರ್ಷದ ಮಾರ್ಚ್–ಏಪ್ರಿಲ್ ಮತ್ತು ಮೇ ತಿಂಗಳಗಳಲ್ಲಿ ಜನರನ್ನು ತಲ್ಲಣಗೊಳಿಸಿದ್ದು, ತಾಪಮಾನದಿಂದ ಮುಕ್ತಿ ಪಡೆಯಬೇಕಾದರೆ ನಮ್ಮ ಸುತ್ತಮುತ್ತಲು ಪರಿಸರವನ್ನು ಸಂರಕ್ಷಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.ರೈತರು, ಕೂಲಿಕಾರ್ಮಿಕರು, ಮಹಿಳೆಯರು, ಮಕ್ಕಳು ಮತ್ತು ಸರ್ಕಾರಿ ನೌಕರರು ಪರಿಸರ ಕುರಿತು ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕಾದ ಅನಿವಾರ್ಯತೆಗಳಿದ್ದು, ನಮ್ಮ ಸುತ್ತಮುತ್ತಲ ಪ್ರದೇಶಗಳಾದ ಗ್ರಾಮೀಣ ಭಾಗದ ಜಮೀನುಗಳ ಬದುಗಳ ಮೇಲೆ ಸರ್ಕಾರಿ ಜಮೀನುಗಳಲ್ಲಿ, ಶಾಲಾ ಕಾಲೇಜು, ಪಂಚಾಯಿತಿ ಆವರಣಗಳಲ್ಲಿ ಕಡ್ಡಾಯವಾಗಿ ಸಸಿ ನೆಟ್ಟು ಮರ ಬೆಳೆಸಿದರೆ ಮನುಷ್ಯನ ಬದುಕು ಹಸನಾಗಲು ಸಾಧ್ಯ ಇಲ್ಲವಾದರೆ ಮುಂದಿನ ದಿನಗಳು ಇಡೀ ಮಾನವ ಕುಲಕ್ಕೆ ಕಂಟಕವಾಗಲಿದೆ ಎಂದು ಹೇಳಿದರು.

ಪ್ರಾಥಮಿಕ ಶಾಲೆಗಳು ಸೇರಿದಂತೆ, ಸರ್ಕಾರಿ ಶಾಲಾ ಕಾಲೇಜು ಆವರಣದಲ್ಲಿ ಸಾಕಷ್ಟು ಖಾಲಿ ಮೈದಾನಗಳಿದ್ದು, ಅವುಗಳಲ್ಲಿ ಹೊಂಗೆ ಸೇರಿದಂತೆ, ಮನುಷ್ಯನಿಗೆ ಅನುಕೂಲಕರವಾಗಿರುವ ಸಸಿಗಳನ್ನು ನೆಟ್ಟು ಗಿಡ ಬೆಳೆಸುವ ಅಗತ್ಯವಿದೆ ಎಂದು ಹೇಳಿದರು.

**ಪ್ರಮುಖ ಸುದ್ದಿ**

# ನವದಂಪತಿಗಳಿಂದ ವಿಶ್ವ ಪರಿಸರ ದಿನ ಆಚರಣೆ

» **ಚಿತ್ರದುರ್ಗ**

ವಿಶ್ವ ಪರಿಸರ ದಿನದಂದು ಸಸಿ ನೆಟ್ಟು ನೀರೆರೆದು ಸಂಭ್ರಮಿಸಿದ ಮಂತ್ರ ಮಾಂಗಲ್ಯ ನವದಂಪತಿಗಳು ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸುವ ಮೂಲಕ ಶುಭಕೋರಿಕೊಂಡರು.

ಧಮ್ಮಾ ಕೇಂದ್ರದಲ್ಲಿ ಮಂತ್ರ ಮಾಂಗಲ್ಯದ ಮೂಲಕ ನವ ದಾಂಪತ್ಯಕ್ಕೆ ಅಡಿಯಿಟ್ಟಿದ್ದ ಶ್ರೀಮತಿ ಸಂಧ್ಯಾಸ್ನೇಹಲತಾ ಮತ್ತು ಗುರುಬಸವ ಅವರು ಇತ್ತೀಚೆಗಷ್ಟೆ ಕುವೆಂಪು ಅವರ ಮಂತ್ರ ಮಾಂಗಲ್ಯದ ಮೂಲಕ ದಾಂಪತ್ಯ ಜೀವನಕ್ಕೆ ಅಡಿಯಿಟ್ಟಿದ್ದರು. ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಇಂದು ಹಮ್ಮಿಕೊಳ್ಳಲಾಗಿದ್ದ ಸಸಿ ನೆಡುವ ಕಾರ್ಯಕ್ರಮದಲ್ಲಿ ಪಾಲ್ಗೊಂಡ ನವ ದಂಪತಿಗಳು ಸಸಿ ನೆಟ್ಟು ನೀರೆರೆದು ಸಂಭ್ರಮಿಸಿದರು. ಇದೇ ಸಂದರ್ಭದಲ್ಲಿ ತಮ್ಮ ಅಭಿಪ್ರಾಯ ಹಂಚಿಕೊಂಡ ನವದಂಪತಿಗಳು ಹೊಸ ಜೀವನಕ್ಕೆ



ಅಡಿಯಿಡುವ ಪ್ರತಿಯೊಬ್ಬ ತರುಣ–ತರುಣಿಯರು ಪರಿಸರ ಪ್ರೀತಿಯನ್ನು ಬೆಳೆಸಿಕೊಳ್ಳುವ ಮೂಲಕ ಸಸಿ ನೆಟ್ಟು, ಗಿಡ ಬೆಳೆಸಿ, ಪರಿಸರ ಸಂರಕ್ಷಣೆಯ ಬಗ್ಗೆ ಆದ್ಯತೆ ನೀಡಿದಾಗ ಸಮಾಜದಲ್ಲಿ ಉತ್ತಮವಾದ ಪರಿಸರವನ್ನು ಸಂರಕ್ಷಿಸಿಕೊಳ್ಳಬಹುದು ಎಂದು ನವದಂಪತಿಗಳಾದ ಗುರುಬಸವ ಮತ್ತು ಸಂಧ್ಯಾ ಸ್ನೇಹಲತಾ ಅಭಿಪ್ರಾಯ ಪಟ್ಟರು.ವಿಮುಕ್ತಿ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಅನ್ನಪೂರ್ಣ ವಿಶ್ವಸಾಗರ್ ಅವರು ಮಾತನಾಡಿ, ಧಮ್ಮಾ ಕೇಂದ್ರದ ಸುತ್ತಾ ಸಮೃದ್ಧವಾಗಿದ್ದ ಬೆಟ್ಟ, ಗುಡ್ಡ, ಕಾಡು, ಪರಿಸರಗಳು ಅಭಿವೃದ್ಧಿ ಹೆಸರಿನಲ್ಲಿ ಕರಗಿಹೋಗಿದ್ದು, ಅವುಗಳನ್ನು ಪುನಃ ಸಂರಕ್ಷಿಸಿಕೊಳ್ಳುವಂತಹ ಅಗತ್ಯಗಳು ಬಹಳ ಇದೆ ಎಂದು ಹೇಳಿದರು.

ಪರಿಸರ ಉಳಿಯದಿದ್ದರೆ ಮಾನವ ಕುಲದಲ್ಲಿ ಆತಂಕಕಾರಿ ಬೆಳವಣಿಗೆಗಳು ಸಂಭವಿಸುವ ಸಾಧ್ಯತೆಗಳಿದೆ. ಪರಿಸರದ ಜೊತೆಗೆ ಜೀವ ಸಂಕಲುನ, ಜೀವ ಜಾನುವಾರುಗಳು, ಕುಡಿಯುವ ನೀರು, ಕೆರೆಕಟ್ಟೆಗಳನ್ನು ಸಂರಕ್ಷಿಸುವ ಮೂಲಕ ಸಮಾಜದಲ್ಲಿಪ್ರತಿಯೊಬ್ಬರುನೆಮ್ಮದಿಯಾಗಿ ಬದುಕುವಂತಹ ವಾತಾವರಣವನ್ನು ನಿರ್ಮಿಸಿಕೊಳ್ಳಬೇಕಾದ ಅಗತ್ಯಗಳು ನಮ್ಮ ಮುಂದಿವೆ ಎಂದು ಹೇಳಿದರು.

ವಿಮುಕ್ತಿವಿದ್ಯಾಸಂಸ್ಥೆಯನಿರ್ದೇಶಕರಾದ ಆರ್.ವಿಶ್ವಸಾಗರ್ ಅವರು ಮಾತನಾಡಿ, ಪರಿಸರ ತಾಪಮಾನದಿಂದಾಗಿ ನಶಿಸುವ ಹಂತಕ್ಕೆ ತಲುಪಿದ್ದು, ಮುಂದಿನ ದಿನಮಾನದಲ್ಲಿ ಪ್ರತಿಯೊಬ್ಬರು ಆತಂಕದ ವಾತಾವರಣದಲ್ಲಿ ಬದುಕಬೇಕಾದ ಪರಿಸ್ಥಿತಿ ನಿರ್ಮಾಣಗೊಂಡರೂ ಅಚ್ಚರಿ ಪಡಬೇಕಿಲ್ಲ. ಆದ್ದರಿಂದ ಪ್ರತಿಯೊಬ್ಬರು ಸಸಿ ನೆಟ್ಟು, ಗಿಡ ಬೆಳೆಸುವ ಕಾರ್ಯಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ವಿಶ್ವಸಾಗರ್ ಸಲಹೆ ನೀಡಿದರು.

ವಿಶ್ವ ಪರಿಸರ ದಿನಾಚರಣೆ ಸಮಾರಂಭದಲ್ಲಿ ಬೆಂಕಿಕೆರೆಯಿಂದ ಶ್ರೀಮತಿ ತಾರಾ, ವಿಮುಕ್ತಿ ವಿದ್ಯಾಸಂಸ್ಥೆಯ ಸಿಬ್ಬಂಧಿಗಳಾದ ಅರಣ್ಯಸಾಗರ್, ಕುಮಾರ್ ಹೆಚ್.,ಬಿಬಿಜಾನ್,ನಾಗರತ್ನಕೆ.ಬಿ.,ವಿಶೇಷ ಆಹ್ವಾನಿತರಾಗಿ ಕುಮಾರಿ. ಭೂಮಿಕ, ಜಗತ್ ಬೋಧಿ, ಅಲೆಮಾರಿ ಜನಾಂಗದ ಮಕ್ಕಳು, ಯುವಕ–ಯುವತಿಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮೂಲಕ ಪರಿಸರ ದಿನಾಚರಣೆಗೆ ವಿಶೇಷ ಚಾಲನೆ ನೀಡಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T